Sub : Constitution of preview committee to select the Director General for Centre for Innovation and Good Governance, Bangalore.

Preamble :

In the Executive Committee meeting of Centre for Innovation and Good Governance convened on 10-04-2013 under the Chairmanship of the Additional Chief Secretary to Government of Karnataka it was decided to constitute a preview committee to select the Director General for Centre for Innovation and Good Governance, Bangalore. Hence, the following order.

GOVERNMENT ORDER No: DPAR 185 AAR 2012, BANGALORE, DATED : 02-05-2013.

Government of Karnataka is pleased to nominate the following persons to the preview committee to select the Director General for Centre for Innovation and Good Governance, Bangalore.

1. Dr. K. Kasturirangan (Former Chairman of Space Commission) - Chairman
2. Additional Chief Secretary to Government of Karnataka - Member
3. Director, ISEC, Bangalore - Member
4. Secretary, DPAR-AR - Member Secretary

By Order and in the name of the Governor of Karnataka

P.R. 752
SC-100

Dr. Geetha. L
Under Secretary to Govenment,
DPAR-AR (Training).

PERSONNEL AND ADMINISTRATIVE REFORMS SECRETARIAT
CORRIGENDUM
NO. DPAR 185 AAR 2013, Bangalore, Dated : 09-06-2013

In the order portion of Government Order No. DPAR 185 AAR 2012 dated: 02-05-2013, after serial No.(2) the following words and figure shall be inserted and be read as **"3. The Director General, Administrative Training Institute, Mysore"** and serial Nos. 3 and 4 shall be read as **"4 and 5".**

By Order and in the name of the Governor of Karnataka

P.R. 753
SC-100

Dr. Geetha. L
Under Secretary to Govenment,
DPAR-AR (Training).

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಡಾ॥ ರಾಜಲಕ್ಷ್ಮಿನಾಯರ್, ದಂತ ಆರೋಗ್ಯ ಅಧಿಕಾರಿ, ಸಮುದಾಯ ಆರೋಗ್ಯ ಕೇಂದ್ರ, ಮುಲ್ಕಿ, ದಕ್ಷಿಣ ಕನ್ನಡ ಜಿಲ್ಲೆ ಇವರ ಅನಧಿಕೃತ ಗೈರುಹಾಜರಿಗೆ ಸಂಬಂಧಿಸಿದಂತೆ ಇವರನ್ನು ಸರ್ಕಾರಿ ಸೇವೆಯಿಂದ ವಜಾ ಮಾಡುವ ದಂಡನೆ ವಿಧಿಸುವ ಬಗ್ಗೆ.

ಓದಲಾಗಿದೆ : ಆಯುಕ್ತರು, ಆಕುಕ ಸೇವೆಗಳು, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ : ಡಿಪಿಜಿ/ಮೈವಿ/ದಕ/34/2009–10, ದಿನಾಂಕ : 12–03–2012.

ಪ್ರಸ್ತಾವನೆ :

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ಡಾ॥ ರಾಜಲಕ್ಷ್ಮಿನಾಯರ್, ದಂತ ಆರೋಗ್ಯ ಅಧಿಕಾರಿ, ಸಮುದಾಯ ಆರೋಗ್ಯ ಕೇಂದ್ರ, ಮುಲ್ಕಿ, ದಕ್ಷಿಣ ಕನ್ನಡ ಜಿಲ್ಲೆ ಇವರು ದಿನಾಂಕ : 14–09–2007 ರಿಂದ ಇಲ್ಲಿಯವರೆಗೆ ಕರ್ತವ್ಯಕ್ಕೆ ಗೈರುಹಾಜರಾಗಿದ್ದು. ಈ ಬಗ್ಗೆ ವಿಚಾರಣೆ ನಡೆಸಿದ ವಿಚಾರಣಾಧಿಕಾರಿಗಳು, ವಿಚಾರಣಾ ವರದಿಯಲ್ಲಿ ಸದರಿ ವೈದ್ಯರು ತಮ್ಮ ಮೇಲಿನ ಆಪಾದನೆಯನ್ನು ಒಪ್ಪಿಕೊಂಡಿರುವುದಾಗಿ ತಿಳಿಸಿ ಅನಧಿಕೃತ ಗೈರುಹಾಜರಿಯ ಆಪಾದನೆ ಸಾಬೀತಾಗಿರುವುದಾಗಿ ವರದಿಯನ್ನು ನೀಡಿದ್ದು, ಸದರಿಯವರ ವಿರುದ್ಧದ ಅನಧಿಕೃತ ಗೈರುಹಾಜರಿ ಆರೋಪವು ಸಾಬೀತಾಗಿರುವುದರಿಂದ ಸದರಿಯವರನ್ನು ಸರ್ಕಾರಿ ಸೇವೆಯಿಂದ ವಜಾ ಮಾಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಸರ್ಕಾರವು ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು. ಡಾ॥ ರಾಜಲಕ್ಷ್ಮಿನಾಯರ್, ದಂತ ಆರೋಗ್ಯ ಅಧಿಕಾರಿ, ಸಮುದಾಯ ಆರೋಗ್ಯ ಕೇಂದ್ರ ಮುಲ್ಕಿ, ದಕ್ಷಿಣ ಕನ್ನಡ ಜಿಲ್ಲೆ. ಇವರ ಅನಧಿಕೃತ ಗೈರು ಹಾಜರಿ ಆರೋಪವು ಸಾಬೀತಾಗಿರುವುದಾಗಿರುವುದರಿಂದ ಸದರಿಯವರಿಗೆ ಸರ್ಕಾರಿ ಸೇವೆಯಿಂದ ವಜಾಗೊಳಿಸುವ ದಂಡನೆಯನ್ನು ವಿಧಿಸಲು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಆಕುಕ 103 ಎಂಎಸ್ಎ 2012, ಬೆಂಗಳೂರು, ದಿನಾಂಕ : 21–06–2013.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಡಾ॥ ರಾಜಲಕ್ಷ್ಮಿನಾಯರ್, ದಂತ ಆರೋಗ್ಯ ಅಧಿಕಾರಿ, ಸಮುದಾಯ ಆರೋಗ್ಯ ಕೇಂದ್ರ, ಮುಲ್ಕಿ, ದಕ್ಷಿಣ ಕನ್ನಡ ಜಿಲ್ಲೆ ಇವರನ್ನು ಅನಧಿಕೃತ ಗೈರು ಹಾಜರಿ ಆರೋಪಕ್ಕಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8(viii)ರ ಅಡಿಯಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ವಜಾಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಶಕುಂತಲಾ ಎಸ್. ಚೌಗಲಾ
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಭಾರ),
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

PR. 750

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಎಂ.ಪಿ. ಗಂಗಾಧರಪ್ಪ, ಮಾಜಿ ಸಿಹೆಚ್‌ಸಿ–658, ಶ್ರೀ ಎಂ.ಎಸ್. ಮೋಹನ್ ಸಿಂಗ್, ಮಾಜಿ ಸಿಪಿಸಿ–1022, ಶ್ರೀ ಹೆಚ್.ಆರ್. ಮಂಜಪ್ಪ, ಮಾಜಿ ಸಿಹೆಚ್‌ಸಿ–456, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ಇವರ ಆದೇಶ ಸಂಖ್ಯೆ: ಡಿಇ–37/88–89 (ಓ.ಬಿ. ಸಂಖ್ಯೆ: 330/2010–11) ದಿನಾಂಕ 21.12.2010

2) ಮೇಲ್ಮನವಿ ಪ್ರಾಧಿಕಾರ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಪೂರ್ವ ವಲಯ, ದಾವಣಗೆರೆ ಇವರ ಆದೇಶ ಸಂಖ್ಯೆ: 50/ಅಪೀಲು/ಸಿಬ್ಬಂದಿ–2/2011–12 (ಓ.ಬಿ.ಸಂಖ್ಯೆ: 128/2012–13) ದಿನಾಂಕ 21.11.2012

3) ಅರ್ಜಿದಾರರುಗಳ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 04.02.2013

4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(1)09/2010–11 ದಿನಾಂಕ: 27.04.2013, 25.05.2013, 08.10.2013

ಪ್ರಸ್ತಾವನೆ:

ಶ್ರೀ ಎಂ.ಪಿ. ಗಂಗಾಧರಪ್ಪ, ಮಾಜಿ ಸಿಹೆಚ್‌ಸಿ–658, ಶ್ರೀ ಎಂ.ಎಸ್. ಮೋಹನ್ ಸಿಂಗ್, ಮಾಜಿ ಸಿಪಿಸಿ–1022, ಶ್ರೀ ಹೆಚ್.ಆರ್. ಮಂಜಪ್ಪ, ಮಾಜಿ ಸಿಹೆಚ್‌ಸಿ–456, ಇವರುಗಳು (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಹಿಂದೆ ಶಿವಮೊಗ್ಗ ಜಿಲ್ಲೆಯ ದೊಡ್ಡಪೇಟೆ ಪೊಲೀಸ್ ಠಾಣೆಯ ಗುನ್ನೆ ಸಂಖ್ಯೆ 14/88 ಕಲಂ 341, 302, 324 ಸಹಿತ 34 ಐ.ಪಿ.ಸಿ. ಪ್ರಕರಣದಲ್ಲಿ ಭಾಗಿಯಾಗಿದ್ದು ಮಾನ್ಯ ಜಿಲ್ಲಾ ಹೆಚ್ಚುವರಿ ಸತ್ರ ನ್ಯಾಯಾಲಯದ ಎಸ್.ಸಿ. ನಂ. 14/1988ರಲ್ಲಿ ವಿಚಾರಣೆ ನಡೆಸಿ ದಿನಾಂಕ 28.07.1995ರ ತೀರ್ಪಿನಲ್ಲಿ ಇವರಿಗೆ ಜೀವಾವಧಿ ಶಿಕ್ಷೆಯನ್ನು ವಿಧಿಸಿದೆ.

ನಂತರ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು ಕ್ರಿಮಿನಲ್ ಅಪೀಲು ಸಂಖ್ಯೆ: 455/1995ರಲ್ಲಿ ದಿನಾಂಕ 13.06.2002ರ ತೀರ್ಪಿನಲ್ಲಿ ಆರೋಪಿಗಳಿಗೆ 01 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ರೂ.5,000/–ಗಳ ದಂಡ ಪಾವತಿಸುವಂತೆ ಆದೇಶಿಸಿದೆ. ಈ ಆದೇಶದ ವಿರುದ್ಧ ಘನ ಸರ್ವೋಚ್ಛ ನ್ಯಾಯಾಲಯದಲ್ಲಿ ಸಲ್ಲಿಸಿದ್ದ ಎಸ್.ಎಲ್.ಪಿ. ಕ್ರಿಮಿನಲ್ ಅಪೀಲು ಸಂ. 382/2003 ದಿನಾಂಕ 03.12.209ರ ತೀರ್ಪಿನಲ್ಲಿ ಕರ್ನಾಟಕ ಉಚ್ಛ ನ್ಯಾಯಾಲಯದ ಶಿಕ್ಷೆಯ ಆದೇಶವನ್ನು ಸ್ಥಿರೀಕರಿಸಿರುವುದರಿಂದ ಹಾಗೂ ಇವರಿಗೆ ಯಾವುದೇ ಮೇಲ್ಮನವಿ ಸಲ್ಲಿಸಲು ಅವಕಾಶವಿಲ್ಲದೇ ಇರುವುದರಿಂದ, ಇವರು ಇಲಾಖೆಯಲ್ಲಿ ಮುಂದುವರಿಯಲು ಅನರ್ಹರಾಗಿರುವುದರಿಂದ ಸರ್ಕಾರಿ ಸುತ್ತೋಲೆ ಸಂಖ್ಯೆ: ಸಿಆಸುಇ 8 ಸೇಇವಿ 1995 ದಿನಾಂಕ 26.06.1996 ಎಲ್ಲಾ ಇಲಾಖೆಯ ನೌಕರರಿಗೂ ಅನ್ವಯಿಸಲ್ಲಿರುವುದರಿಂದ, ಆ.ಪೊ.ಅ.ರವರುಗಳು ಮಂಡಿಸಿರುವ ವಾದದಲ್ಲಿ ಯಾವುದೇ ಹುರುಳಿರುವುದಿಲ್ಲವೆಂದು ಪರಿಗಣಿಸಿ, ಕಾರಣ ಕೇಳುವ ಸೂಚನಾ ಪತ್ರಕ್ಕೆ ಆ.ಪೊ.ಅ.ರವರುಗಳು ನೀಡಿದ ಲಿಖಿತ ಸಮಜಾಯಿಷಿಯನ್ನು ಒಪ್ಪದೆ ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಶಿವಮೊಗ್ಗ ಇವರು ದಿನಾಂಕ 21.12.2010ರ ಆದೇಶದಲ್ಲಿ ಕೆಳಕಂಡ ದಂಡನೆಯನ್ನು ವಿಧಿಸಿರುತ್ತಾರೆ.

1) ಶ್ರೀ ಎಂ.ಪಿ. ಗಂಗಾಧರಪ್ಪ ಸಿಹೆಚ್‌ಸಿ 658 ಹಾಲಿ ಡಿ.ಎಸ್.ಬಿ., ಡಿ.ಪಿ.ಓ., ಶಿವಮೊಗ್ಗರವರನ್ನು ಕರ್ತವ್ಯಕ್ಕೆ ಅನಧಿಕೃತವಾಗಿ ಗೈರು ಹಾಜರಾದ ದಿನಾಂಕ: 19.05.2010 ರಿಂದ ಪೂರ್ವಾನ್ವಯದಿಂದ ಜಾರಿಗೆ ಬರುವಂತೆ ಸೇವೆಯಿಂದ ವಜಾಗೊಳಿಸಿದೆ ಹಾಗೂ ಅಮಾನತ್ತಿನ ಅವಧಿ ದಿನಾಂಕ: 14.01.88 ರಿಂದ 08–04.88 ರವರೆಗಿನ ಅವಧಿಯನ್ನು ಅಮಾನೆತ್ತೆಂದು ಪರಿಗಣಿಸಿ ಈಗಾಗಲೇ ಪಡೆದ ಜೀವನಾಧಾರ ಭತ್ಯಗೆ ಮಿತಿಗೊಳಿಸಿದೆ.

2) ಶ್ರೀ ಎಂ.ಎಸ್. ಮೋಹನ್ ಸಿಂಗ್ ಸಿಪಿಸಿ 1022, ಹಾಲಿ ಭದ್ರಾವತಿ ಹಳೇನಗರ ಠಾಣೆ ರವರನ್ನು ಕರ್ತವ್ಯಕ್ಕೆ ಅವಧಿಕೃತವಾಗಿ ಗೈರು ಹಾಜರಾದ ದಿ:21.05.2010 ರಿಂದ ಪೂರ್ವಾನ್ವಯದಿಂದ ಜಾರಿಗೆ ಬರುವಂತೆ ಸೇವೆಯಿಂದ ವಜಾಗೊಳಿಸಿದೆ ಹಾಗೂ ಅಮಾನತ್ತಿನ ಅವಧಿಯಾದ ದಿನಾಂಕ: 13.01.88 ರಿಂದ 21.04.88, 05.05.88 ರಿಂದ 19.01.93, ಮತ್ತು 01.08.95 ರಿಂದ 18.01.96ರವರೆಗಿನ ಅವಧಿಯನ್ನು ಅಮಾನೆತ್ತೆಂದು ಪರಿಗಣಿಸಿ ಈಗಾಗಲೇ ಪಡೆದ ಜೀವನಾಧಾರ ಭತ್ಯಗೆ ಮಿತಿಗೊಳಿಸಿದೆ.

3) ಶ್ರೀ ಹೆಚ್.ಆರ್. ಮಂಜಪ್ಪ ಸಿ.ಹೆಚ್.ಸಿ.–456., ಹಾಲಿ ಹೊಳೆಹೊನ್ನೂರು ಪೊಲೀಸ್ ಠಾಣೆರವರನ್ನು ಕರ್ತವ್ಯಕ್ಕೆ ಅನಧಿಕೃತವಾಗಿ ಗೈರು ಹಾಜರಾದ ದಿನಾಂಕ: 21.05.2010 ರಿಂದ ಪೂರ್ವಾನ್ವಯದಿಂದ ಜಾರಿಗೆ ಬರುವಂತೆ ಸೇವೆಯಿಂದ ವಜಾಗೊಳಿಸಿದೆ ಹಾಗೂ ಅಮಾನತ್ತಿನ ಅವಧಿ ದಿನಾಂಕ: 13.01.88 ರಿಂದ 21.04.88, ದಿನಾಂಕ: 05.05.88 ರಿಂದ 19.01.93 ಮತ್ತು ದಿನಾಂಕ: 01.08.95 ರಿಂದ 18.01.96 ರವರೆಗಿನ ಅವಧಿಯನ್ನು ಅಮಾನೆತ್ತೆಂದು ಪರಿಗಣಿಸಿ ಈಗಾಗಲೇ ಪಡೆದ ಜೀವನಾಧಾರ ಭತ್ಯಗೆ ಮಿತಿಗೊಳಿಸಿದೆ

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರುಗಳ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಪೂರ್ವ ವಲಯ, ದಾವಣಗೆರೆ ಇವರು ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 21.11.2012ರ ಆದೇಶದಲ್ಲಿ ಮೇಲ್ಮನವಿಗಳನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರುಗಳು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿಯಲ್ಲಿನ ವಾದಾಂಶಗಳನ್ನು ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಗಾಗಿರುವುದರಿಂದ ಶಿಸ್ತು ಪ್ರಾಧಿಕಾರ ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 18 ಪೊಸಿಅ 2013 ಬೆಂಗಳೂರು, ದಿನಾಂಕ: 21.12.2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ.ಪಿ. ಗಂಗಾಧರಪ್ಪ, ಮಾಜಿ ಸಿಹೆಚ್‌ಸಿ–658, ಶ್ರೀ ಎಂ.ಎಸ್. ಮೋಹನ್ ಸಿಂಗ್, ಮಾಜಿ ಸಿಪಿಸಿ–1022, ಶ್ರೀ ಹೆಚ್.ಆರ್. ಮಂಜಪ್ಪ, ಮಾಜಿ ಸಿಹೆಚ್‌ಸಿ–456 ಇವರುಗಳು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿಗಳನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.382

SC - 30

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಕೆ. ನಂಜುಂಡಸ್ವಾಮಿ, ಪಿಸಿ–541, ಅಬಕಾರಿ ಮತ್ತು ಲಾಟರಿ ನಿಷೇಧ ದಳ, ಮಂಡ್ಯ ಜಿಲ್ಲೆ ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಮಂಡ್ಯ ಜಿಲ್ಲೆ ಇವರ ಆದೇಶ ಸಂಖ್ಯೆ: ಸಿಬ್ಬಂದಿ(2)ಡಿಇ/14/2011–12 (ಓ.ಬಿ. ಸಂಖ್ಯೆ: 53/13–14) ದಿನಾಂಕ 05.06.2013

2) ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು ಇವರ ಆದೇಶ ಸಂಖ್ಯೆ: ಅಪೀಲು/04/2013–14 (ಒಬಿ ಸಂಖ್ಯೆ: 29/2013–14) ದಿನಾಂಕ 22.08.2013

3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 20.09.2013

4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)55/2013–14 ದಿನಾಂಕ 28.11.2013

ಪ್ರಸ್ತಾವನೆ:

ಶ್ರೀ ಕೆ. ನಂಜುಂಡಸ್ವಾಮಿ, ಪಿಸಿ–541, ಅಬಕಾರಿ ಮತ್ತು ಲಾಟರಿ ನಿಷೇಧ ದಳ, ಮಂಡ್ಯ ಜಿಲ್ಲೆ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಇವರು ಈ ಹಿಂದೆ ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಕರ್ತವ್ಯದಲ್ಲಿ ಅತೀವ ಉದಾಸೀನತೆ ಮತ್ತು ಉದ್ಧಟತನ ಪ್ರದರ್ಶಿಸಿದ ಕಾರಣ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

"ಶ್ರೀ ಕೆ. ನಂಜುಡಸ್ವಾಮಿ, ಪಿಸಿ–541, (ಹಾಲಿ ಅಮಾನತ್ತು) ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆ ಕರ್ತವ್ಯ ನಿರ್ವಹಿಸುತ್ತಿದ್ದು, ದಿನಾಂಕ:10.07.2011 ರಂದು ಸಂಜೆ 7–55 ಗಂಟೆ ಸಮಯದಲ್ಲಿ ನೀವು ಎಎಸ್ಐರವರ ಜೊತೆ ಕರ್ತವ್ಯಕ್ಕೆ ಹೋಗದಿದ್ದ ವಿಚಾರದಲ್ಲಿ ಸಿಪಿಐ, ಮಂಡ್ಯ ಗ್ರಾಮಾಂತರವರು ನೀವು ಕರ್ತವ್ಯಕ್ಕೆ ಹೋಗದಿದ್ದ ಬಗ್ಗೆ ಕೇಳಿದಾಗ ನೀನು ಮಾಡನಾಡಬೇಡ ಏನು ಕೇಳ ಬೇಡ, ನೀನು ಕೇಳುವುದಕ್ಕೆ ಯಾರು? ಸಬ್ ಇನ್ಸ್‌ಪೆಕ್ಟರ್ ರವರು ಹೇಳಿದರೆ ಮಾತ್ರ ಹೋಗುವುದೆಂದು ಸಿಪಿಐ, ಮಂಡ್ಯ ಗ್ರಾಮಾಂತರ ಜೊತೆ ಏರು ಧ್ವನಿಯಲ್ಲಿ ಮಾತನಾಡಿ ಎಎಸ್ಐ ರವರು ಸಹ ತಮ್ಮ ಜೊತೆಯಲ್ಲಿ ಕರ್ತವ್ಯಕ್ಕೆ ಬರುವಂತೆ ತಿಳಿಸಿದರೂ ಸಹ ಕರ್ತವ್ಯಕ್ಕೆ ಹೋಗದೆ ಕರ್ತವ್ಯದಲ್ಲಿ ಅತೀವ ನಿರ್ಲಕ್ಷತೆ, ಉದಾಸೀನತೆ ಮತ್ತು ಉದ್ದಟತನದಿಂದ ವರ್ತಿಸಿರುತ್ತೀರಿ ಎಂದು ನಿಮ್ಮ ಮೇಲೆ ಆರೋಪವಿರುತ್ತದೆ."

ಮೇಲಿನ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಮಂಡ್ಯ ಜಿಲ್ಲೆ ಇವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 05.06.2013ರ ಆದೇಶದಲ್ಲಿ ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು 06 ತಿಂಗಳ ಕಾಲ ನಂತರದ ವಾರ್ಷಿಕ ವೇತನ ಬಡ್ತಿಯ ಮೇಲೆ ಪರಿಣಾಮ ಬೀರದಂತೆ ಮುಂದೂಡಿ, ದಿನಾಂಕ 12.07.2011ರಿಂದ 21.09.2011ರವರೆಗೆ 72 ದಿವಸಗಳು ಅಮಾನತ್ತಿನಲ್ಲಿ ಇದ್ದ ಅವಧಿಯನ್ನು ಅಮಾನತ್ತೆಂದು ಪರಿಗಣಿಸಲಾದ ದಂಡನೆಯನ್ನು ವಿಧಿಸಿರುತ್ತಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ 22.08.2013ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಲಾಗಿದೆ.

ಈ ಎರಡೂ ಆದೇಶಗಳ ವಿರುದ್ಧ ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಮೇಲಾಧಿಕಾರಿಗಳ ಮಾತುಗಳನ್ನು ಧಿಕ್ಕರಿಸಿರುವುದು ಸಾಬೀತಾಗಿರುತ್ತದೆ. ಈ ಹಿನ್ನಲೆಯಲ್ಲಿ ಶಿಸ್ತು ಪ್ರಾಧಿಕಾರವು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 138 ಪೊಸಿಅ 2013 ಬೆಂಗಳೂರು, ದಿನಾಂಕ: 04.02.2014

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಕೆ. ನಂಜುಂಡಸ್ವಾಮಿ, ಪಿಸಿ–541, ಅಬಕಾರಿ ಮತ್ತು ಲಾಟರಿ ನಿಷೇಧ ದಳ, ಮಂಡ್ಯ ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.384

SC - 30

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಎಸ್.ಬಿ. ನಂದ್ಯಾಳ, ಸಿಹೆಚ್‌ಸಿ–940, ಅಬಕಾರಿ ಮತ್ತು ಲಾಟರಿ ನಿಷೇಧ ದಳ, ಬಾಗಲಕೋಟ ಜಿಲ್ಲೆ, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ ಇವರ ಆದೇಶ ಸಂಖ್ಯೆ: ಡಿಇ/84/ಉವ/2010 ದಿನಾಂಕ 02.12.2010

2) ಮೇಲ್ಮನವಿ ಪ್ರಾಧಿಕಾರ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು ಇವರ ಆದೇಶ ಸಂಖ್ಯೆ ಅಪೀಲು(4)/74/2010–11 (ಓ.ಬಿ.ಸಂಖ್ಯೆ: 30/2011–12) ದಿನಾಂಕ 14.12.2011

3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 16.01.2013

4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)76/2012–13 ದಿನಾಂಕ 28.03.2013

5) ಕರ್ನಾಟಕ ಲೋಕಸೇವಾ ಆಯೋಗದ ಪತ್ರ ಸಂಖ್ಯೆ: ಪಿಎಸ್‌ಸಿ 86 ಸಿಎನ್ಎಸ್ 2013 ದಿನಾಂಕ: 16.12.2013

ಪ್ರಸ್ತಾವನೆ:

ಶ್ರೀ ಎಸ್.ಬಿ. ನಂದ್ಯಾಳ, ಸಿಹೆಚ್‌ಸಿ–940, ಅಬಕಾರಿ ಮತ್ತು ಲಾಟರಿ ನಿಷೇಧ ದಳ, ಬಾಗಲಕೋಟ ಜಿಲ್ಲೆ, ಇವರು (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಹಿಂದೆ ಕಲಾದಗಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಕರ್ತವ್ಯಕ್ಕೆ ಅನಧಿಕೃತವಾಗಿ ಗೈರುಹಾಜರಾಗಿ ಕರ್ತವ್ಯದಲ್ಲಿ ನಿರ್ಲಕ್ಷ್ಯತನ ಹಾಗೂ ಬೇಜವಾಬ್ದಾರಿತನ ತೋರಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಡಿಸಲಾಗಿದೆ

ದೋಷಾರೋಪಣೆ:–

"ಅ.ಪೊ.ಅ ಸಿಎಚ್‌ಸಿ ಬ.ನಂ. 940 ಎಸ್.ಬಿ. ನಂದ್ಯಾಳ ನಿಮಗೆ ದಿನಾಂಕ: 9.7.2008 ರಂದು 1400 ಘಂಟೆಗೆ ಕಲಾದಗಿ ಪೊಲೀಸ್ ಠಾಣೆಯ ಹಿಂದಿನ ಎಸ್‌ಎಚ್‌ಓ ರವರು ನಿಮಗೆ ಠಾಣೆ ಚಾರ್ಜ ವಹಿಸಿಕೊಳ್ಳಲು ಠಾಣಾ ಡೈರಿಯನ್ನು ನೀವು ವಶಕ್ಕೆ ಒಪ್ಪಿಸಿರುತ್ತಾರೆ ಸದರಿ ಎಸ್‌ಹೆಚ್‌ಓ ರವರು ಚಾರ್ಜ ನೀಡಿದ ನಂತರ ಠಾಣಾ ದಿನಚರಿಯಲ್ಲಿ ಈ ಬಗ್ಗೆ ನಮೂದಿಸಿದೇ ಮದ್ಯಪಾನ ಮಾಡಿ ಸಮವಸ್ತ್ರದ ಮೇಲೆ ಠಾಣೆಯಲ್ಲಿ ಕುಳಿತಿರುವಾಗ ಸಂಜೆ 1700 ರಿಂದ 1800 ಘಂಟೆಗೆ ಸುಮಾರಿಗೆ ಅಪಾದಿತ ಪಿಎಸ್‌ಐ ರವರು ನಿಮ್ಮನ್ನು ಠಾಣಾ ಡೈರಿ ಬರೆದಿರುವ ಬಗ್ಗೆ ಹಾಗೂ ಮಧ್ಯಪಾನ ಮಾಡಿದ ಬಗ್ಗೆ ವಿಚಾರಿಸಲಾಗಿ ನೀವು ಮೇಲಾಧಿಕಾರಿಗಳಿಗೆ ಸರಿಯಾಗಿ ಉತ್ತರಿಸದೇ ವಾಗ್ವಾದಕ್ಕಿಳಿದು ಕೈ ಕೈ ಮಿಲಾಯಿಸಿ ಬಡೆದಾಡಿರುತ್ತೀರಿ. ನಂತರ ಸದರಿ ಘಟನೆಯ ಬಗ್ಗೆ ಮೇಲಾಧಿಕಾರಿಗಳಿಗೆ ಲಿಖಿತವಾಗಿ ಅಥವಾ ಮೌಖಿಕವಾಗಿ ದೂರು ನೀಡದೇ ನೇರವಾಗಿ ಜಿಲ್ಲಾ ಆಸ್ಪತ್ರೆ ಬಾಗಲಕೋಟದಲ್ಲಿ ದಾಖಲಾಗಿ ಮೇಲಾಧಿಕಾರಿಗಳ ಅನುಮತಿಯಿಲ್ಲದೇ ಪತ್ರಿಕಾ ಹಾಗೂ ದೂರದರ್ಶನ ಮಾಧ್ಯಮದಲ್ಲಿ ಹೇಳಿಕೆ/ಸಂದರ್ಶನ ನೀಡಿರುತ್ತೀರಿ. ಅಲ್ಲದೇ ದಿನಾಂಕ: 10.7.2008 ರಿಂದ ನೀವು ನಿಮ್ಮ ಜವಾಬ್ದಾರಿಯುತ ಕರ್ತವ್ಯಕ್ಕೆ ಅನಧೀಕೃತವಾಗಿ ಗೈರು ಹಾಜರ ಉಳಿದ ನಿಮ್ಮ ಕರ್ತವ್ಯದಲ್ಲಿ ಘೋರ ಬೇಜವಾಬ್ದಾರಿತನ ಮತ್ತು ನಿಷ್ಕಾಳಜಿತನ ಪ್ರದರ್ಶಿಸಿರುವಿರಿ"

ಮೇಲ್ಕಂಡ ಆರೋಪದ ಮೇಲೆ ನಡೆಸಲಾದ ಇಲಾಖಾ ವಿಚಾರಣೆಯಲ್ಲಿ ಇವರ ವಿರುದ್ದದ ಆರೋಪವು ಭಾಗಶಃ ಸಾಬೀತಾಗಿದೆಯೆಂದು ವಿಚಾರಣಾಧಿಕಾರಿಗಳು ಅಭಿಪ್ರಾಯಪಟ್ಟಿದ್ದು ಅದರನ್ವಯ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ 02.12.2010ರ ಆದೇಶದಲ್ಲಿ ಆರೋಪಿತರ ವೇತನವನ್ನು ಸಿ.ಹೆಚ್.ಸಿ. ಹುದ್ದೆಯ ಕನಿಷ್ಠ ವೇತನ ಹಂತಕ್ಕೆ ಇಳಿಸಿ ವೇತನ ಬಡ್ತಿಗಳನ್ನು ಹೊಸದಾಗಿ ಗಳಿಸುವ ದಂಡನೆಯನ್ನು ವಿಧಿಸಿರುತ್ತಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ 14.12.2011ರ ಆದೇಶದಲ್ಲಿ ತಿರಸ್ಕರಿಸಲಾಗಿದೆ.

ಆರೋಪಿತ ನೌಕರರು ಈ ಎರಡೂ ಆದೇಶದ ವಿರುದ್ಧ ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಶಿಸ್ತು ಪ್ರಾಧಿಕಾರವು ವಿಧಿಸಿರುವ ದಂಡನೆಯು ಕೆ.ಸಿ.ಎಸ್.ಆರ್. ನಿಯಮ 59ಕ್ಕೆ ವ್ಯತಿರಿಕ್ತವಾಗಿರುವ ಹಿನ್ನಲೆಯಲ್ಲಿ ಪರಿಷ್ಕೃತ ದಂಡನೆಯನ್ನು ವಿಧಿಸುವ ಕುರಿತಂತೆ ಓದಲಾದ (5)ರ ಪತ್ರದಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಸಹಮತಿಯನ್ನು ಪಡೆದು ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 15 ಪೊಸಿಅ 2013 ಬೆಂಗಳೂರು, ದಿನಾಂಕ: 01.01.2014

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಸ್.ಬಿ. ನಂದ್ಯಾಳ, ಸಿಹೆಚ್‌ಸಿ–940, ಅಬಕಾರಿ ಮತ್ತು ಲಾಟರಿ ನಿಷೇಧ ದಳ, ಬಾಗಲಕೋಟ ಜಿಲ್ಲೆ, ಇವರಿಗೆ ವಿಧಿಸಿದ ದಂಡನೆಯನ್ನು ಈ ಕೆಳಕಂಡಂತೆ ಮಾರ್ಪಡಿಸಿ ಆದೇಶಿಸಿದೆ.

(i) ಶ್ರೀ ಎಸ್.ಬಿ. ನಂದ್ಯಾಳ, ಸಿ.ಹೆಚ್.ಸಿ.–940, ಇವರ ವೇತನವನ್ನು ಸಿ.ಹೆಚ್.ಸಿ. ಹುದ್ದೆಯ ಕನಿಷ್ಠ ವೇತನಕ್ಕೆ ಒಂದು ವರ್ಷದ ಕಾಲ ಸಂಚಿತ ಪರಿಣಾಮ ಬೀರುವಂತೆ (With cummulative effect) ಇಳಿಸಿದೆ.

(ii) ಈ ದಂಡನೆಯು ಶಿಸ್ತು ಪ್ರಾಧಿಕಾರಿಗಳ ದಂಡನೆ ಆದೇಶ ದಿನಾಂಕ: 02–12–10 ರಿಂದಲೇ ಜಾರಿಗೆ ಬರುತ್ತದೆ.

(iii) ಈ ದಂಡನೆಯ ಅವಧಿಯಲ್ಲಿ ಶ್ರೀಯುತರು ಯಾವುದೇ ವಾರ್ಷಿಕ ವೇತನ ಬಡ್ತಿಗಳಿಗೆ ಅಥವಾ ಪದೋನ್ನತಿಗೆ ಅರ್ಹರಿರುವುದಿಲ್ಲ.

(iv) ದಂಡನೆಯ ಅವಧಿಯಾದ ಒಂದು ವರ್ಷ ಮುಗಿದ ನಂತರ ಇವರು ದಂಡನಾದೇಶದ ಹಿಂದಿನ ದಿನ ಯಾವ ವೇತನವನ್ನು ಪಡೆಯುತ್ತಿದ್ದರೋ, ಅದೇ ವೇತನ ಶ್ರೇಣಿಯ ಅದೇ ವೇತನ ಹಂತಕ್ಕೆ ಇವರ ವೇತನವನ್ನು ಮರು ನಿಗದಿಗೊಳಿಸತಕ್ಕದ್ದು ಮತ್ತು ಹೊಸದಾಗಿ ವಾರ್ಷಿಕ ವೇತನ ಬಡ್ತಿಯನ್ನು ನೀಡತಕ್ಕದ್ದು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.383

SC - 30

R.N.I. No. KARBIL/2001/47147 POSTAL REGN. No. RNP/KA/BGS/2202/2014-16
Licensed to post without prepayment **WPP No. 297**

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ವೀರಪ್ಪ, ಸಿಪಿಸಿ–196, ಕೊಪ್ಪ ಪೊಲೀಸ್ ಠಾಣೆ ಹಾಲಿ ಮಂಡ್ಯ ಪಶ್ಚಿಮ ಪೊಲೀಸ್ ಠಾಣೆ, ಮಂಡ್ಯ ಜಿಲ್ಲೆ ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಮಂಡ್ಯ ಜಿಲ್ಲೆ ಇವರ ಆದೇಶ ಸಂಖ್ಯೆ: ಸಿಬ್ಬಂದಿ(2)ಡಿಇ/05/2012–13 (ಓ.ಬಿ. ಸಂಖ್ಯೆ: 198/12–13) ದಿನಾಂಕ 10.10.2012
2) ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು ಇವರ ಆದೇಶ ಸಂಖ್ಯೆ: ಅಪೀಲು/38/2012–13 (ಒಬಿ ಸಂಖ್ಯೆ: 52/2012–13) ದಿನಾಂಕ 21.03.2013
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 23.09.2013
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)56/2013–14 ದಿನಾಂಕ 28.11.2013

ಪ್ರಸ್ತಾವನೆ:

ಶ್ರೀ ವೀರಪ್ಪ, ಸಿಪಿಸಿ–196, ಮಂಡ್ಯ ಪಶ್ಚಿಮ ಪೊಲೀಸ್ ಠಾಣೆ, ಮಂಡ್ಯ ಜಿಲ್ಲೆ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಇವರು ಈ ಹಿಂದೆ ಕೊಪ್ಪ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಕರ್ತವ್ಯದಲ್ಲಿ ಅಶಿಸ್ತು, ದುರ್ನಡತೆ ಪ್ರದರ್ಶಿಸಿದ ಕಾರಣ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

> "ಶ್ರೀ ವೀರಪ್ಪ, ಸಿಪಿಸಿ–196, ಮಂಡ್ಯ ಪಶ್ಚಿಮ ಪೊಲೀಸ್ ಠಾಣೆ ಆದ ನೀವು ಈ ಹಿಂದೆ ಕೊಪ್ಪ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ದಿನಾಂಕ: 25.04.2012ರಂದು ಬೆಳಿಗ್ಗೆ 07–50 ಗಂಟೆ ಸಮಯದಲ್ಲಿ ಸಾದಾ ಉಡುಪಿನಲ್ಲಿ ಕೊಪ್ಪ ಪೊಲೀಸ್ ಠಾಣೆಗೆ ಹೋಗಿ ಠಾಣೆಯಲ್ಲಿ ಠಾಣಾಧಿಕಾರಿಗಳಾಗಿದ್ದ ಸಿಹೆಚ್‌ಸಿ–188 ಶ್ರೀ ಬಿ.ಎನ್. ಕೃಷ್ಣಪ್ಪರವರಿಗೆ ಕಂಪ್ಯೂಟರ್ ಪರೀಕ್ಷೆಗೆ ಹೋಗಬೇಕು ಪಾಸ್‌ಪೋರ್ಟ್ ಕೊಡಿ ಎಂದು ಕೇಳಿ, ಸಿಹೆಚ್‌ಸಿ–188 ಕೃಷ್ಣಪ್ಪರವರು ಪಿ.ಎಸ್.ಐ ರವರಿಗೆ ಪೋನ್ ಮಾಡಿ ಕೇಳುತ್ತೇನೆಂದು ಹೇಳಿದಾಗ, ನೀವು "ಅವರನ್ನು ಏನು ಕೇಳುವುದು, ಸೂಳೆಮಗನೆ, ಬೋಳಿಮಗನೆ, ನನಗೆ ಟೈಂ ಆಗುತ್ತೆ ಬೇಗ ಕೊಡು " ಎಂದು ಸಿಹೆಚ್‌ಸಿ–188 ಕೃಷ್ಣಪ್ಪರವರ ಸಮವಸ್ತ್ರವನ್ನು ಹಿಡಿದು ಎಡಕಪಾಲಕ್ಕೆ ಹೊಡೆದು ಅಸಭ್ಯವಾಗಿ ವರ್ತಿಸಿರುತ್ತೀರಿ. ನೀವು ಒಬ್ಬ ಜವಾಬ್ದಾರಿಯುತ ಪೊಲೀಸ್ ಸಿಬ್ಬಂದಿಯಾಗಿದ್ದು, ಮೇಲ್ಪಟ್ಟ ಅಧಿಕಾರಿಯವರ ಜೊತೆ ಅವಿಧೇಯತೆ ಅಶಿಸ್ತಿನಿಂದ ವರ್ತಿಸಿ ದುರ್ನಡತೆಯನ್ನು ಪ್ರದರ್ಶಿಸಿರುತ್ತೀರಿ."

ಮೇಲಿನ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ಆ.ಪೊ.ಅ.ರವರು ಠಾಣಾಧಿಕಾರಿಯೊಂದಿಗೆ ಏರುದನಿಯಲ್ಲಿ ಮಾತನಾಡಿರುವುದು ಧೃಡಪಟ್ಟಿರುವುದೆಂದು ವಿಚಾರಣಾಧಿಕಾರಿಗಳು ಸಲ್ಲಿಸಿದ ವರದಿ ಆಧಾರದ ಮೇಲೆ ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಮಂಡ್ಯ ಜಿಲ್ಲೆ ಇವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 10.10.2012ರ ಆದೇಶದಲ್ಲಿ ಅರ್ಜಿದಾರರ ಮುಂದಿನ 01 ವಾರ್ಷಿಕ ವೇತನ ಬಡ್ತಿಯನ್ನು ನಂತರದ ವಾರ್ಷಿಕ ವೇತನ ಬಡ್ತಿಯ ಮೇಲೆ ಪರಿಣಾಮ ಬೀರುವಂತೆ ಮುಂದೂಡಿ, ದಿನಾಂಕ 10.05.2012ರಿಂದ 12.07.2012ರವರೆಗೆ 64 ದಿನಗಳು ಅಮಾನತ್ತಿನಲ್ಲಿ ಇದ್ದ ಅವಧಿಯನ್ನು ಅಮಾನತ್ತೆಂದು ಪರಿಗಣಿಸಲಾದ ದಂಡನೆಯನ್ನು ವಿಧಿಸಿರುತ್ತಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ 21.03.2013ರ ಆದೇಶದಲ್ಲಿ ಶಿಸ್ತು ಪ್ರಾಧಿಕಾರದ ಆದೇಶವನ್ನು ಮಾರ್ಪಡಿಸಿ ಇವರಿಗೆ **"ಸೆನ್ಸೂರ್"** ದಂಡನೆ ವಿಧಿಸಿ, ಇವರ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದು ಪರಿಗಣಿಸಿ ಆದೇಶಿಸಿರುತ್ತಾರೆ.

ಮೇಲ್ಮನವಿ ಆದೇಶದ ವಿರುದ್ಧ ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಠಾಣಾಧಿಕಾರಿಯೊಡನೆ ಏರುಧ್ವನಿಯಲ್ಲಿ ಮಾಡನಾಡಿರುವುದು ಸಾಬೀತಾಗಿದ್ದು, ಈಗಾಗಲೇ ಮೇಲ್ಮನವಿ ಪ್ರಾಧಿಕಾರವು ದಂಡನೆಯನ್ನು ಕಡಿಮೆಗೊಳಿಸಿ **ವಾಗ್ದಂಡನೆ** ವಿಧಿಸಿರುವ ಹಿನ್ನಲೆಯಲ್ಲಿ ಮೇಲ್ಮನವಿ ಪ್ರಾಧಿಕಾರವು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 137 ಪೊಸಿಅ 2013 ಬೆಂಗಳೂರು, ದಿನಾಂಕ: 03.02.2014

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ವೀರಪ್ಪ, ಸಿಪಿಸಿ–196, ಕೊಪ್ಪ ಪೊಲೀಸ್ ಠಾಣೆ ಹಾಲಿ ಮಂಡ್ಯ ಪಶ್ಚಿಮ ಪೊಲೀಸ್ ಠಾಣೆ, ಮಂಡ್ಯ ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

P.R.385
SC - 30

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59

ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಸಚಿವಾಲಯ

ಸುತ್ತೋಲೆ

ಸಂ. ಕಸಂವಾ 27 ಕೆಓಎಲ್ 2013, ಬೆಂಗಳೂರು, ದಿನಾಂಕ : 20-03-2014.

ಸರ್ಕಾರದ ಆಡಳಿತದ ಎಲ್ಲಾ ಹಂತಗಳಲ್ಲೂ ಕನ್ನಡ ಬಳಕೆ ಮಾಡುವಂತೆ ಮತ್ತು ಸರ್ಕಾರದ ಎಲ್ಲಾ ಇಲಾಖೆಗಳು ಅಂತರ್ಜಾಲದಲ್ಲಿ ಕನ್ನಡ ತಾಣಗಳನ್ನು ಹೊಂದಿರಬೇಕೆಂದು ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ಆದಾಗ್ಯೂ ಹಲವು ಸರ್ಕಾರಿ ಇಲಾಖೆಗಳು ಅಂತರ್ಜಾಲದಲ್ಲಿ ಕನ್ನಡ ವೆಬ್‌ಸೈಟ್‌ಗಳನ್ನು ಹೊಂದದೇ ಇರುವುದರಿಂದ ಹಾಗೂ ಹಲವು ಇಲಾಖೆಗಳ ವೆಬ್‌ಸೈಟ್‌ಗಳು ಆಂಗ್ಲ ಭಾಷೆಯಲ್ಲಿ ಇದ್ದು ಜನ ಸಾಮಾನ್ಯರಿಗೆ ಸರ್ಕಾರದ ಯೋಜನೆಗಳ ಬಗ್ಗೆ ಸರಿಯಾದ ಮಾಹಿತಿ ದೊರೆಯುವುದು ಸಾಧ್ಯವಾಗುತ್ತಿಲ್ಲವಾದ ಕಾರಣ ಎರಡು ತಿಂಗಳ ಅವಧಿಯೊಳಗೆ ಅಂತರ್ಜಾಲದಲ್ಲಿ ಆಂಗ್ಲ ಭಾಷೆಯಲ್ಲಿ ಲಭ್ಯವಿರುವ ಮಾಹಿತಿಯನ್ನು ಕನ್ನಡ ಭಾಷೆಯಲ್ಲಿ ಅನುವಾದಿಸಿ ಪ್ರಕಟಿಸುವಂತೆ ಮತ್ತು ಕನ್ನಡ ತಾಣಗಳನ್ನು ಕಡ್ಡಾಯವಾಗಿ ತೆರೆಯುವಂತೆ ಹಾಗೂ ಇನ್ನು ಮುಂದೆ ಅಂತರ್ಜಾಲದಲ್ಲಿ ಪ್ರಕಟಿಸುವ ಎಲ್ಲಾ ಮಾಹಿತಿಯನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಕಡ್ಡಾಯವಾಗಿ ಪ್ರಕಟಿಸಬೇಕೆಂದು ದಿನಾಂಕ : 01-07-2013ರ ಅ.ಸ. ಪತ್ರ : ಸಿಆಸುಇ 27 ಕೆಓಎಲ್ 2013 ರಲ್ಲಿ ಎಲ್ಲಾ ಇಲಾಖಾ ಮುಖ್ಯಸ್ಥರು/ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಇವರುಗಳಿಗೆ ಸೂಚಿಸಲಾಗಿದೆ. ಆದ್ದರಿಂದ ಸರ್ಕಾರದ ಎಲ್ಲಾ ಇಲಾಖೆಗಳು ಈ ಬಗ್ಗೆ ಕೈಗೊಂಡಿರುವ ಕ್ರಮಗಳ ಅನುಪಾಲನಾ ವರದಿಯನ್ನು ಈ ಸುತ್ತೋಲೆ ಹೊರಡಿಸಿದ ಒಂದು ತಿಂಗಳ ಒಳಗಾಗಿ ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಕಡ್ಡಾಯವಾಗಿ ಒದಗಿಸುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಯು.ಬಿ. ಉಳವಿ

ಸರ್ಕಾರದ ಉಪ ಕಾರ್ಯದರ್ಶಿ,

ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.

PR. 366

SC-100

ಕಂದಾಯ ಸಚಿವಾಲಯ

ವಿಷಯ : ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸ.ನಂ. 68 (ಹಳೆ ಸ.ನಂ. 26) ರಲ್ಲಿ ಈ ಹಿಂದೆ ಮಂಜೂರಾದ 2-00 ಎಕರೆ ಜಮೀನಿಗೆ ಬದಲಾಗಿ ಇದೇ ಗ್ರಾಮದ ಸ.ನಂ. 22 ರಲ್ಲಿನ 2-00 ಎಕರೆ ಜಮೀನನ್ನು ಡಾ॥ ವಿಷ್ಣುವರ್ಧನ್ ಸ್ಮಾರಕ ನಿರ್ಮಾಣಕ್ಕಾಗಿ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ : ಆರ್‌ಡಿ 329 ಎಲ್‌ಜಿಬಿ 2013, ದಿನಾಂಕ : 04-07-2013.
2. ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ ಇವರ ಪತ್ರ ಸಂಖ್ಯೆ : ಎಲ್‌ಎನ್‌ಡಿ(ಎಸ್) ಸಿ.ಆರ್./231/12-13, ದಿನಾಂಕ : 21-12-2013.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರಕಾರಿ ಆದೇಶದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸ.ನಂ. 68 (ಹಳೆ ಸ.ನಂ. 26) ರಲ್ಲಿ 2-00 ಎಕರೆ ಜಮೀನನ್ನು ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರನ್ವಯ ಕನ್ನಡದ ಮೇರು ನಟ ಡಾ॥ ವಿಷ್ಣುವರ್ಧನ್ ಸ್ಮಾರಕ ನಿರ್ಮಾಣಕ್ಕಾಗಿ ಉಚಿತವಾಗಿ ಮಂಜೂರು ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಜಿಲ್ಲಾಧಿಕಾರಿಗಳ ಪತ್ರದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸ.ನಂ. 68 (ಹಳೆ ಸ.ನಂ. 26) ರಲ್ಲಿನ ಜಮೀನಿಗೆ ಸಂಬಂಧಿಸಿದಂತೆ ಕೆಎಟಿ ನ್ಯಾಯಾಲಯವು ಅಪೀಲ್ ಅರ್ಜಿ ಸಂಖ್ಯೆ : 619/2013 ರಲ್ಲಿ ತಡೆಯಾಜ್ಞೆ ನೀಡಿರುವುದರಿಂದ ಸದರಿ ಜಮೀನಿಗೆ ಬದಲಾಗಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸ.ನಂ. 22 ರಲ್ಲಿನ 2-00 ಎಕರೆ ಜಮೀನನ್ನು ಡಾ॥ ವಿಷ್ಣುವರ್ಧನ ಸ್ಮಾರಕ ನಿರ್ಮಾಣಕ್ಕಾಗಿ ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಆರ್‌ಡಿ 29 ಎಲ್‌ಜಿಬಿ 2014, ಬೆಂಗಳೂರು, ದಿನಾಂಕ : 04-03-2014.

ಸರ್ಕಾರಿ ಆದೇಶ ಸಂಖ್ಯೆ : ಆರ್‌ಡಿ 329 ಎಲ್‌ಜಿಬಿ 2013, ದಿನಾಂಕ : 04-07-2013ರಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸ.ನಂ. 68 (ಹಳೆ ಸ.ನಂ. 26) ರಲ್ಲಿ ಡಾ॥ ವಿಷ್ಣುವರ್ಧನ ಸ್ಮಾರಕ ನಿರ್ಮಾಣಕ್ಕಾಗಿ ಮಂಜೂರು ಮಾಡಲಾಗಿದ್ದ 2-00 ಎಕರೆ ಜಮೀನಿಗೆ ಕರ್ನಾಟಕ ಮೇಲ್ಮನವಿ ಪ್ರಾಧಿಕಾರವು ತಡೆಯಾಜ್ಞೆ ನೀಡಿರುವುದರಿಂದ ಸದರಿ ಜಮೀನಿಗೆ ಬದಲಾಗಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಮೈಲಸಂದ್ರ ಗ್ರಾಮದ ಸ.ನಂ. 22 ರಲ್ಲಿನ 2-00 ಎಕರೆ ಜಮೀನನ್ನು ಡಾ॥ ವಿಷ್ಣುವರ್ಧನ ಸ್ಮಾರಕ ನಿರ್ಮಾಣಕ್ಕಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಉಚಿತವಾಗಿ ಮಂಜೂರು ಮಾಡಿದೆ.

1. ಮಂಜೂರಾದ ಜಮೀನನ್ನು ಯಾವ ಉದ್ದೇಶಕ್ಕೆ ಮಂಜೂರು ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಎರಡು ವರ್ಷಗಳ ಅವಧಿಯೊಳಗೆ ಉಪಯೋಗಿಸತಕ್ಕದ್ದು.
2. ಮಂಜೂರಾದ ಭೂಮಿಯನ್ನು ವಿನಾಶಕಾರಿಯಾದ ಅಥವಾ ಖಾಯಂ ಆಗಿ ಹಾನಿಕಾರಕವಾಗುವ ರೀತಿಯಲ್ಲಿ ಬಳಸತಕ್ಕದ್ದಲ್ಲ.
3. ಮಂಜೂರಾದ ಜಮೀನನ್ನು ಕಂದಾಯ ಇಲಾಖೆಯ ಅನುಮತಿ ಇಲ್ಲದೆ ಮಾರಾಟ ಮಾಡುವುದಾಗಲೀ, ಗುತ್ತಿಗೆ/ಉಪಗುತ್ತಿಗೆಗೆ ನೀಡುವುದಾಗಲೀ, ಅಡಮಾನ, ವರ್ಗಾವಣೆ, ದಾನ, ಇತರೆ ಯಾವುದೇ ರೀತಿಯ ಪರಭಾರೆಯನ್ನು ಮಾಡಬಾರದು.
4. ಮಂಜೂರಾದ ಜಮೀನಿನಲ್ಲಿ ಯಾವುದೇ ರೀತಿಯ ಅತಿಕ್ರಮಣವಾಗದಂತೆ ಕ್ರಮವಹಿಸತಕ್ಕದ್ದು.

5. ಮಂಜೂರು ಮಾಡಲ್ಪಡುವ ಜಮೀನಿನ ಮೇಲೆ ಯಾವುದೇ ನ್ಯಾಯಾಲಯದಲ್ಲಿ ದಾವೆಗಳು ದಾಖಲಾಗಿದ್ದಲ್ಲಿ, ಈ ಮಂಜೂರಾತಿಯು ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.
6. ಮಂಜೂರಾದ ಜಮೀನಿನ ಯಾವುದೇ ಭಾಗವು ಸಾರ್ವಜನಿಕ ಉದ್ದೇಶಕ್ಕೆ ಅಗತ್ಯವಾಗಿದ್ದಲ್ಲಿ, ಸರ್ಕಾರವು ಸದರಿ ಜಮೀನನ್ನು ಪರಿಹಾರ ನೀಡದೇ ಹಿಂತೆಗೆದುಕೊಳ್ಳುವ ಹಕ್ಕನ್ನು ಹೊಂದಿರುತ್ತದೆ.
7. ಮಂಜೂರಾದ ಜಮೀನು ಸಂಸ್ಥೆಗೆ ಅವಶ್ಯವಿಲ್ಲವೆಂದು ಕಂಡುಬಂದಲ್ಲಿ ಕಂದಾಯ ಇಲಾಖೆಗೆ ಹಿಂದಿರುಗಿಸತಕ್ಕದ್ದು.
8. ಮಂಜೂರಾದ ಜಮೀನಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಪ್ರಾರಂಭಿಸುವ ಪೂರ್ವದಲ್ಲಿ ಶಾಸನಬದ್ಧವಾಗಿ ಪಡೆಯಬೇಕಾದ ಪರವಾನಗಿಗಳನ್ನು ಸಂಬಂಧಿತ ಪ್ರಾಧಿಕಾರಗಳಿಂದ ಪಡೆಯತಕ್ಕದ್ದು. ಹಾಗೂ ನಿಯಮಾನುಸಾರ ಪಾವತಿಸಬೇಕಾದ ಎಲ್ಲಾ ರೀತಿಯ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು.
9. ಮಂಜೂರಾದ ಜಮೀನು 1969ರ ಕರ್ನಾಟಕ ಭೂ ಮಂಜೂರಾತಿ ನಿಯಮಗಳಿಗೆ ಬದ್ಧವಾಗಿದ್ದು. ಸದರಿ ನಿಯಮಗಳ ಉಲ್ಲಂಘನೆಯಾದಲ್ಲಿ ಈ ಮಂಜೂರಾತಿ ಆದೇಶ ತನ್ನಷ್ಟಕ್ಕೆ ತಾನೇ ರದ್ದಾಗುವುದು ಹಾಗೂ ಯಾವುದೇ ಪರಿಹಾರ ನೀಡದೇ ಮಂಜೂರಾದ ಜಮೀನನ್ನು ಸರ್ಕಾರದ ವಶಕ್ಕೆ ಪಡೆಯಲಾಗುವುದು.
10. ಜಿಲ್ಲಾಧಿಕಾರಿಗಳು ಮಂಜೂರಾದ ಜಮೀನನ್ನು ಫಲಾನುಭವಿಗಳಿಗೆ/ಇಲಾಖೆಗೆ ಹಸ್ತಾಂತರಿಸುವಾಗ ಮಂಜೂರಾದ ಪ್ರದೇಶದ ವಾಸ್ತವ ಪರಿಸ್ಥಿತಿಗಳನ್ನು ಗಮನದಲ್ಲಿಟ್ಟುಕೊಂಡು ಪೂರಕವಾದ ಷರತ್ತುಗಳನ್ನು ವಿಧಿಸಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

PR. 367 **ಉಮಾದೇವಿ**

SC-50 ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಭೂಮಂಜೂರಾತಿ–1).

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವಾಲಯ

ವಿಷಯ : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ವಿವಿಧ ವೃಂದಗಳ ಒಟ್ಟು 352 ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ : 01–04–2014 ರಿಂದ 31–03–2015ರವರೆಗೆ ಮುಂದುವರೆಸುವ ಬಗ್ಗೆ–ಆದೇಶ.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ : ಆನಾಸ 73 ಆಇಸೇ 2013, ದಿನಾಂಕ : 24–04–2013.
2. ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರ ಪತ್ರ ಸಂಖ್ಯೆ: ಸಿಎಫ್ಎಸ್/32/ಇಎಸ್‌ಟಿ(1)/86–87, ದಿನಾಂಕ : 09–01–2014.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ : 24–04–2013ರ ಸರ್ಕಾರದ ಆದೇಶದಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ 352 ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ : 01–04–2013 ರಿಂದ 31–03–2014 ರವರೆಗೆ ಮುಂದುವರೆಸಿ ಆದೇಶ ಹೊರಡಿಸಲಾಗಿರುತ್ತದೆ.

ಆಯುಕ್ತರು, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ರವರು ಮೇಲೆ (2)ರಲ್ಲಿ ಓದಲಾದ ದಿನಾಂಕ : 09–01–2014ರ ಪತ್ರದಲ್ಲಿ ಮೇಲೆ (1)ರಲ್ಲಿ ಓದಲಾದ ದಿನಾಂಕ : 24–04–2013ರ ಆದೇಶದಲ್ಲಿ ಮುಂದುವರೆಸಲಾದ 352 ತಾತ್ಕಾಲಿಕ ಹುದ್ದೆಗಳನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ದಿನಾಂಕ : 01–04–2014 ರಿಂದ 31–03–2015 ರವರೆಗೆ ಮುಂದುವರೆಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದೆ. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ವಿವಿಧ ವೃಂದಗಳ ಒಟ್ಟು 352 ತಾತ್ಕಾಲಿಕ ಹುದ್ದೆಗಳನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ದಿನಾಂಕ : 01–04–2014 ರಿಂದ 31–03–2015 ರವರೆಗೆ ಮುಂದುವರೆಸುವುದು ಸೂಕ್ತವೆಂದು ತೀರ್ಮಾನಿಸಿದೆ. ಆದ್ದರಿಂದ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಆನಾಸ 33 ಆಇಸೇ 2014, ಬೆಂಗಳೂರು, ದಿನಾಂಕ : 29–03–2014.

ಸರ್ಕಾರದ ಆದೇಶ ಸಂಖ್ಯೆ : ಆನಾಸ 73 ಆಇಸೇ 2013, ದಿನಾಂಕ : 24–04–2013ರಲ್ಲಿ ಮುಂದುವರೆಸಲಾಗಿದ್ದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ವಿವಿಧ ವೃಂದಗಳ ಒಟ್ಟು 352 ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ : 01–04–2014 ರಿಂದ 31–03–2015ರವರೆಗೆ ಅಥವಾ ಮುಂದಿನ ಆದೇಶದವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮುಂದುವರಿಸಿ ಆದೇಶಿಸಿದೆ. ಮುಂದುವರಿಸಿದ ಹುದ್ದೆಗಳ ವಿವರ ಕೆಳಕಂಡಂತಿದೆ :

i) ದಿನಾಂಕ : 01–11–85 ರಿಂದ ಜಾರಿಗೊಳಿಸಲಾದ ಒಟ್ಟು 370 ತಾತ್ಕಾಲಿಕವಾಗಿ ಮಂಜೂರಾದ ಹುದ್ದೆಗಳಲ್ಲಿ ಕಡಿತಗೊಳಿಸಿದ ನಂತರ ತಾತ್ಕಾಲಿಕವಾಗಿ ಮುಂದುವರೆಸಬೇಕಾದ ಹುದ್ದೆಗಳು :

ಕ್ರಮ ಸಂಖ್ಯೆ	ಹುದ್ದೆಗಳ ವಿವರ	ಮುಂದುವರಿಸಬೇಕಾದ ಹುದ್ದೆಗಳ ಸಂಖ್ಯೆ
1.	ಶಿರಸ್ತೇದಾರರು	107
2.	ಪ್ರಥಮ ದರ್ಜೆ ಸಹಾಯಕರು	160

ii) ಸರ್ಕಾರದ ಆದೇಶ ಸಂಖ್ಯೆ : ಆನಾಸ 203 ಆಇಸೇ 98, ದಿನಾಂಕ : 02–04–98 ಹಾಗೂ 21–09–98 ಮತ್ತು ಸರ್ಕಾರದ ಆದೇಶ ಸಂಖ್ಯೆ: ಆನಾಸ 134 ಆಇಸೇ 97, ದಿನಾಂಕ : 23–03–99ರ ಪ್ರಕಾರ ಹೊಸದಾಗಿ ಸೃಷ್ಠಿಸಲಾದ 7 ಜಿಲ್ಲೆಗಳಿಗೆ ಸೃಜಿಸಲಾದ ಹುದ್ದೆಗಳು :

ಕ್ರಮ ಸಂಖ್ಯೆ	ಹುದ್ದೆಗಳ ವಿವರ	ಮುಂದುವರಿಸಬೇಕಾದ ಹುದ್ದೆಗಳ ಸಂಖ್ಯೆ
1.	ಉಪ ನಿರ್ದೇಶಕರು	07
2.	ಶಿರಸ್ತೇದಾರರು	01
3.	ಬೆರಳಚ್ಚುಗಾರರು	02
4.	ವಾಹನ ಚಾಲಕರು	07
5.	ಲೆಕ್ಕಾಧೀಕ್ಷಕರು	07
	ಒಟ್ಟು	**24 ಹುದ್ದೆಗಳು**

iii) ಸರ್ಕಾರದ ಆದೇಶ ಸಂಖ್ಯೆ : ಆನಾಸ 170 ಆಇಸೇ 07, ದಿನಾಂಕ : 23–08–2007, ದಿನಾಂಕ : 23–08–2007ರ ಪ್ರಕಾರ ರಾಮನಗರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಸೃಜಿಸಲಾದ ಹುದ್ದೆಗಳು :

ಕ್ರಮ ಸಂಖ್ಯೆ	ಹುದ್ದೆಗಳ ವಿವರ	ಮುಂದುವರಿಸಬೇಕಾದ ಹುದ್ದೆಗಳ ಸಂಖ್ಯೆ
1.	ಉಪ ನಿರ್ದೇಶಕರು	02
2.	ಲೆಕ್ಕಾಧೀಕ್ಷಕರು	02
3.	ವ್ಯವಸ್ಥಾಪಕರು	02
4.	ಪ್ರಥಮ ದರ್ಜೆ ಸಹಾಯಕರು (ಲೆಕ್ಕಪತ್ರ)	02
5.	ದ್ವಿತೀಯ ದರ್ಜೆ ಸಹಾಯಕರು	02
6.	ಬೆರಳಚ್ಚುಗಾರರು	02
7.	ವಾಹನ ಚಾಲಕರು	02
	ಒಟ್ಟು	**14**

iv) ಸರ್ಕಾರದ ಆದೇಶ ಸಂಖ್ಯೆ : ಆನಾಸ 177 ಆಇಸೇ 2009, ದಿನಾಂಕ : 30–03–2010ರ ಪ್ರಕಾರ ಯಾದಗಿರಿ ಜಿಲ್ಲೆಗೆ ಸೃಜಿಸಲಾದ ತಾತ್ಕಾಲಿಕ ಹುದ್ದೆಗಳು :

ಕ್ರಮ ಸಂಖ್ಯೆ	ಹುದ್ದೆಗಳ ವಿವರ	ಮುಂದುವರಿಸಬೇಕಾದ ಹುದ್ದೆಗಳ ಸಂಖ್ಯೆ
1.	ಉಪ ನಿರ್ದೇಶಕರು	01
2.	ಲೆಕ್ಕಾಧೀಕ್ಷಕರು	01
3.	ಶಿರಸ್ತೇದಾರರು/ವ್ಯವಸ್ಥಾಪಕರು	01
4.	ಪ್ರಥಮ ದರ್ಜೆ ಸಹಾಯಕರು (ಲೆಕ್ಕಪತ್ರ)	01
5.	ದ್ವಿತೀಯ ದರ್ಜೆ ಸಹಾಯಕರು	01
	ಒಟ್ಟು	**05 ಹುದ್ದೆಗಳು**

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ : 10–07–1996ರ ಐಟಂ 3 ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

PR. 368

ಆರ್. ಮಹಾದೇವ

ಪೀಠಾಧಿಕಾರಿ, ಆಹಾರ–1 ಶಾಖೆ,

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ.

ಕಾರ್ಮಿಕ ಸಚಿವಾಲಯ

ವಿಷಯ : ಡಾ॥ ಲತಾ ಎಂ. ಗುತ್ತಿಗೆ ಆಧಾರಿತ ವೈದ್ಯರು, ಕಾರ್ಮಿಕರ ರಾಜ್ಯ ವಿಮಾ ಚಿಕಿತ್ಸಾಲಯ, ಕೋಣನಕುಂಟೆ, ಇವರ ಗುತ್ತಿಗೆ ಆಧಾರದ ನೇಮಕಾತಿ ಅವಧಿಯನ್ನು ಮುಂದುವರಿಸುವ ಕುರಿತು.

ಓದಲಾಗಿದೆ :
1. ಸರ್ಕಾರದ ಅಧಿಸೂಚನೆ ಸಂಖ್ಯೆ : ಕಾಇ 450 ಎಲ್‌ಎಸ್‌ಐ 2009, ದಿನಾಂಕ : 20–04–2010.
2. ನಿರ್ದೇಶಕರು, ಕಾರಾವಿ ಯೋಜನೆ ವೈದ್ಯಕೀಯ ಸೇವೆಗಳು, ಇವರ ಚಲನಾದೇಶ ಸಂಖ್ಯೆ : ವೈದ್ಯರು/112/2010–11, ದಿನಾಂಕ : 29–04–2013.
3. ನಿರ್ದೇಶಕರು, ಕಾ.ರಾ.ವಿ. ಯೋಜನೆ ವೈದ್ಯಕೀಯ ಸೇವೆಗಳು ಇವರ ಪತ್ರ ಸಂಖ್ಯೆ : ವೈದ್ಯರು/84/2013–14, ದಿನಾಂಕ : 30–09–2013 ಮತ್ತು 17–12–2013.

ಪ್ರಸ್ತಾವನೆ :

ಮೇಲೆ ಓದಲಾದ (1) ರ ಸರ್ಕಾರದ ಅಧಿಸೂಚನೆಯಲ್ಲಿ ಕಾ.ರಾ.ವಿ. ಯೋಜನೆ ವೈದ್ಯಕೀಯ ಸೇವೆಗಳು ಇಲಾಖೆಯಲ್ಲಿ ಖಾಲಿಯಿರುವ ವಿಮಾ ವೈದ್ಯಾಧಿಕಾರಿಗಳ ಹುದ್ದೆಗೆ ಒಟ್ಟು 12 ಮಂದಿ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಆದೇಶಿಸಲಾಗಿತ್ತು. ಸದರಿ ನೇಮಕಾತಿಯು ಒಂದು ವರ್ಷದ ಅವಧಿಗೆ ಅಥವಾ ನೇರ ನೇಮಕಾತಿಯ ಮೂಲಕ ವಿಮಾ ವೈದ್ಯಾಧಿಕಾರಿ ಹುದ್ದೆ ತುಂಬುವವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಇರುತ್ತದೆಯೆಂಬ ಹಾಗೂ ಆಯ್ಕೆ ಪಟ್ಟಿಯಲ್ಲಿನ ವಿಮಾ ವೈದ್ಯಾಧಿಕಾರಿ ಅಭ್ಯರ್ಥಿಗಳಲ್ಲಿ ತಜ್ಞ ವೈದ್ಯರುಗಳಿಗೆ ಮಾಸಿಕ ರೂ. 13,000–00 ಹಾಗೂ ಉಳಿದ ವೈದ್ಯರುಗಳಿಗೆ ರೂ. 11,000–00ಗಳ ಸಂಚಿತ ವೇತನವನ್ನು ಪಾವತಿಸಲಾಗುವುದೆಂಬ ಷರತ್ತು ವಿಧಿಸಲಾಗಿದೆ.

ಅದರಂತೆ ನಿರ್ದೇಶಕರು, ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳು ರವರು ಮೇಲೆ ಓದಲಾದ (2)ರ ಚಲನಾದೇಶದಲ್ಲಿ ಡಾ॥ ಲತಾ ಎಂ. ಬಿನ್ ಮುನಿವೆಂಕಟಪ್ಪ ಹೆಚ್. ಇವರನ್ನು ಕಾರ್ಮಿಕರ ರಾಜ್ಯ ವಿಮಾ ಚಿಕಿತ್ಸಾಲಯ, ಕೋಣನಕುಂಟೆ ಇಲ್ಲಿಗೆ ಗುತ್ತಿಗೆ ಆಧಾರದ ಮೇಲೆ ವಿಮಾ ವೈದ್ಯಾಧಿಕಾರಿ ಹುದ್ದೆಗೆ ನೇಮಿಸಿ ಆದೇಶಿಸಿರುತ್ತಾರೆ.

ನಿರ್ದೇಶಕರು, ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳು ರವರು ಮೇಲೆ ಓದಲಾದ (3)ರ ಪತ್ರಗಳಲ್ಲಿ ಸರ್ಕಾರದ ಅಧಿಸೂಚನೆಯ ಪ್ರಕಾರ ಡಾ॥ ಲತಾ ಎಂ. ಇವರು ದಿನಾಂಕ : 30–04–2010 ರಿಂದ ಕರ್ತವ್ಯ ನಿರ್ವಹಿಸುತ್ತಿದ್ದು, ಉಳಿದ ವಿಮಾ ವೈದ್ಯಾಧಿಕಾರಿಗಳು ವಿವಿಧ ಕಾರಣಗಳಿಗಾಗಿ ಸೇವೆಯಿಂದ ಬಿಡುಗಡೆ ಹೊಂದಿರುತ್ತಾರೆಂದು ಹಾಗೂ ಪ್ರಸ್ತುತ ಇಲಾಖೆಗೆ ಒಟ್ಟಾರೆ 580 ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾತಿಯಾಗಿದ್ದು, ಈ ಪೈಕಿ 474 ಹುದ್ದೆಗಳು ಭರ್ತಿಯಾಗಿದ್ದು, 106 ಹುದ್ದೆಗಳು ಖಾಲಿ ಇರುತ್ತವೆಯೆಂದು ತಿಳಿಸಿ, ಇಲಾಖೆಯಲ್ಲಿ ವೈದ್ಯಾಧಿಕಾರಿಗಳ ಕೊರತೆ ಇರುವುದರಿಂದ ಡಾ॥ ಲತಾ ಎಂ. ರವರ ಸೇವೆಯನ್ನು ಮುಂದುವರೆಸಬಹುದಾಗಿದೆಯೆಂದು ವರದಿ ಮಾಡಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಕಾಇ 172 ಎಲ್‌ಎಸ್‌ಐ 2012, ಬೆಂಗಳೂರು, ದಿನಾಂಕ : 09–04–2014.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅಧಿಸೂಚನೆ ಸಂಖ್ಯೆ : ಕಾಇ 450 ಎಲ್‌ಎಸ್‌ಐ 2009, ದಿನಾಂಕ: 20–04–2010 ರನ್ವಯ ಗುತ್ತಿಗೆ ಆಧಾರದ ಮೇಲೆ ನೇಮಕ ಹೊಂದಿರುವ ಡಾ॥ ಲತಾ ಎಂ. ಗುತ್ತಿಗೆ ಆಧಾರದ ವೈದ್ಯರು, ಕಾರ್ಮಿಕರ ರಾಜ್ಯ ವಿಮಾ ಚಿಕಿತ್ಸಾಲಯ, ಕೋಣನಕುಂಟೆ, ಬೆಂಗಳೂರು ಇವರ ಗುತ್ತಿಗೆ ಆಧಾರದ ನೇಮಕಾತಿ ಅವಧಿಯನ್ನು ದಿನಾಂಕ : 30–04–2011 ರಿಂದ 30–04–2014ರವರೆಗೆ ಅಥವಾ ನೇರ ನೇಮಕಾತಿಯ ಮೂಲಕ ಹುದ್ದೆಯನ್ನು ತುಂಬುವವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮುಂದುವರೆಸಲು ಮಂಜೂರಾತಿ ನೀಡಲಾಗಿದೆ :–

1. ಈಗಾಗಲೇ ಸಂಚಿತ ವೇತನ ರೂ. 11,000–00 (ಹನ್ನೊಂದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಪಾವತಿಸಲಾಗುತ್ತಿದ್ದು, ಅದು ಎಂದಿನಂತೆ ಮುಂದಿನ ಆದೇಶದವರೆಗೆ ಮುಂದುವರಿಯುತ್ತದೆ.
2. ಚಿಕಿತ್ಸಾಲಯದ ಹಣಕಾಸಿನ ವ್ಯವಹಾರವನ್ನು ಗುತ್ತಿಗೆ ಆಧಾರಿತ ವಿಮಾ ವೈದ್ಯಾಧಿಕಾರಿ ನಿರ್ವಹಿಸುವಂತಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ವಿ. ನಾಗೇಶ ರಾವ್
ಪೀಠಾಧಿಕಾರಿ,
ಕಾರ್ಮಿಕ ಇಲಾಖೆ (ಕಾರಾವಿ ಯೋ (ವೈ) ಸೇವೆಗಳು).

PR. 369
SC-100

ಕಾರ್ಮಿಕ ಸಚಿವಾಲಯ

ವಿಷಯ : ಡಾ॥ ಜೆ. ಭುವನೇಶ್ವರಿ, ಹಿರಿಯ ಆಯುರ್ವೇದಿಕ್ ಫಿಸಿಷಿಯನ್ ಕಾರ್ಮಿಕರ ರಾಜ್ಯ ವಿಮಾ ಆಸ್ಪತ್ರೆ, ಇಂದಿರಾನಗರ, ಬೆಂಗಳೂರು ಇವರಿಗೆ ವಿಶೇಷ ಹೆಚ್ಚುವರಿ ಭತ್ಯೆ ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಪತ್ರ ಸಂಖ್ಯೆ : ಕಾಇ 51 ಎಲ್‌ಎಸ್‌ಐ 2011, ದಿನಾಂಕ : 16–03–2011.
2. ಸರ್ಕಾರದ ಆದೇಶ ಸಂಖ್ಯೆ : ಕಾಇ 03 ಎಲ್‌ಎಸ್‌ಐ 2013, ದಿನಾಂಕ : 22–10–2013.
3. ನಿರ್ದೇಶಕರು, ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳು ಇವರ ಪತ್ರಗಳ ಸಂಖ್ಯೆ: ವೈದ್ಯರು/503/2013–14, ದಿನಾಂಕ : 07-01-2014 ಮತ್ತು 15–02–2014.

ಪ್ರಸ್ತಾವನೆ :

ಮೇಲೆ ಓದಲಾದ (1) ರ ಪತ್ರದಲ್ಲಿ ಡಾ॥ ಜೆ. ಭುವನೇಶ್ವರಿ, ಹಿರಿಯ ಆಯುರ್ವೇದಿಕ್ ಫಿಸಿಷಿಯನ್ ಇವರಿಗೆ ತುರ್ತು ಚಿಕಿತ್ಸಾ ರೂ. 3,000–00 ಮತ್ತು ಸ್ನಾತಕೋತ್ತರ ಭತ್ಯೆ ರೂ. 8,000–00ಗಳನ್ನು ನೀಡಲು ಅನುಮತಿಸಿದೆ. ಓದಲಾದ (2)ರ ಆದೇಶದಲ್ಲಿ ಕಾರ್ಮಿಕರ ರಾಜ್ಯ

ವಿಮಾ ಯೋಜನೆ ವೈದ್ಯಕೀಯ ಸೇವೆಗಳು ಇಲಾಖೆಯ ವಿವಿಧ ವೃಂದದ ವೈದ್ಯಾಧಿಕಾರಿಗಳಿಗೆ ದಿನಾಂಕ : 18–12–2012 ರಿಂದಲೇ ಜಾರಿಗೆ ಬರುವಂತೆ 13 ವರ್ಷಕ್ಕಿಂತ ಹೆಚ್ಚಿನ ಸೇವೆ ಸಲ್ಲಿಸಿದ, ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಹತೆ ಹೊಂದಿದ ವೈದ್ಯರುಗಳು ಪಡೆಯುತ್ತಿದ್ದ ವಿಶೇಷ ಭತ್ಯೆಗಳನ್ನು ರೂ. 11,000–00 ದಿಂದ ರೂ. 19,800–00 ಗಳಿಗೆ ಪರಿಷ್ಕರಿಸಿ ಆದೇಶಿಸಿದೆ. ಓದಲಾದ (3)ರ ಪತ್ರದಲ್ಲಿ ನಿರ್ದೇಶಕರು, ಇ.ಎಸ್.ಐ. ಇವರು ಇಲಾಖೆಯ ವೈದ್ಯಾಧಿಕಾರಿಗಳಿಗೆ ಹೆಚ್ಚುವರಿ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾದ ಮಾದರಿಯಲ್ಲಿಯೇ ಡಾ॥ ಜೆ. ಭುವನೇಶ್ವರಿ, ಹಿರಿಯ ಆಯುರ್ವೇದಿಕ್ ಫಿಸಿಷಿಯನ್ ಇವರೂ ಸಹ 13 ವರ್ಷಕ್ಕಿಂತ ಹೆಚ್ಚಿನ ಸೇವೆ ಸಲ್ಲಿಸಿದ ಹಾಗೂ ಸ್ನಾತಕೋತ್ತರ ಪದವಿ ಹೊಂದಿರುವುದರಿಂದ ಇವರಿಗೂ ಸಹ ಹೆಚ್ಚುವರಿ ವಿಶೇಷ ಭತ್ಯೆಯನ್ನು ಮಂಜೂರು ಮಾಡಬಹುದಾಗಿದೆಯೆಂದು ಪ್ರಸ್ತಾಪಿಸಿದ್ದಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ನಂತರ ಈ ಕೆಳಕಂಡಂತೆ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಕಾಇ 30 ಎಲ್‌ಎಸ್‌ಐ 2014, ಬೆಂಗಳೂರು, ದಿನಾಂಕ : 22–03–2014.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಡಾ॥ ಜೆ. ಭುವನೇಶ್ವರಿ, ಹಿರಿಯ ಆಯುರ್ವೇದಿಕ್ ಫಿಸಿಷಿಯನ್, ಕಾರ್ಮಿಕರ ರಾಜ್ಯ ವಿಮಾ ಆಸ್ಪತ್ರೆ, ಇಂದಿರಾನಗರ, ಬೆಂಗಳೂರು ಇವರಿಗೆ ದಿನಾಂಕ : 18–12–2012 ರಿಂದಲೇ ಅನ್ವಯವಾಗುವಂತೆ ಈಗ ಪಡೆಯುತ್ತಿರುವ ರೂ. 11,000–00 ಗಳ ವಿಶೇಷ ಭತ್ಯೆಯನ್ನು ರೂ. 19,800–00ಗಳಿಗೆ ಪರಿಷ್ಕರಿಸಿ ಮಂಜೂರಾತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಎಫ್‌ಡಿ 62 ಸೇವೆಗಳು–2/2013, ದಿನಾಂಕ : 26–03–2013ರ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ವಿ. ನಾಗೇಶ ರಾವ್

ಪೀಠಾಧಿಕಾರಿ,

ಕಾರ್ಮಿಕ ಇಲಾಖೆ (ಕಾರಾವಿ ಯೋ (ವೈ) ಸೇವೆಗಳು).

PR. 370
SC-50

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ವಿಷಯ : ಪಿಲಿಕುಳ ನಿಸರ್ಗಧಾಮಕ್ಕೆ ದಿವಂಗತ ಡಾ॥ ಶಿವರಾಂ ಕಾರಂತ ರವರ ಹೆಸರನ್ನು ನಾಮಕರಣ ಮಾಡುವ ಕುರಿತು

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ : ಅಪಜೀ 83 ಎಫ್‌ಡಬ್ಲ್ಯೂಎಲ್ 99, ಬೆಂಗಳೂರು, ದಿನಾಂಕ : 26–08–99
2. ಕಾರ್ಯನಿರ್ವಾಹಕ ನಿರ್ದೇಶಕರು, ಡಾ॥ ಶಿವರಾಂ ಕಾರಂತ ಪಿಲಿಕುಳ ನಿಸರ್ಗಧಾಮ, ಮಂಗಳೂರು ಇವರ ಪತ್ರ ಸಂಖ್ಯೆ : ನಂ.ಪಿಎನ್‌ಡಿ. ಸಿಆರ್ : 177/ಡಬ್ಲ್ಯುಪಿ/38124/2009–10, ದಿನಾಂಕ : 15–05–2013.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ : 26–08–1999ರ ಸರ್ಕಾರಿ ಆದೇಶದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಪಿಲಿಕುಳ ನಿಸರ್ಗಧಾಮಕ್ಕೆ ದಿವಂಗತ ಡಾ॥ ಶಿವರಾಂ ಕಾರಂತರ ಹೆಸರನ್ನು ನಾಮಕರಣ ಮಾಡುವಂತೆ ಆದೇಶಿಸಲಾಗಿರುತ್ತದೆ.

2. ಮೇಲೆ (2)ರಲ್ಲಿ ಓದಲಾದ ದಿನಾಂಕ : 15–05–2013ರ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಡಾ॥ ಶಿವರಾಂ ಕಾರಂತ ಪಿಲಿಕುಳ ನಿಸರ್ಗಧಾಮ, ಮೂಡುಶೆಡ್ಡೆ, ಮಂಗಳೂರು ಇವರು ಮೇಲಿನ ದಿನಾಂಕ : 26–08–99ರ ಸರ್ಕಾರಿ ಆದೇಶದ ಅನುಷ್ಠಾನವಾಗಿಲ್ಲವೆಂದು ಪಿಲಿಕುಳ ನಿಸರ್ಗಧಾಮ ಮತ್ತು ಇತರರ ವಿರುದ್ಧ ಶ್ರೀ ಹರಿಕೃಷ್ಣ ಪುನರೂರು, ಮೂಲ್ಕಿ ಇವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ : 38124/2009ರಲ್ಲಿ ಪ್ರಕರಣ ದಾಖಲಿಸಿರುವುದಾಗಿಯೂ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ : 04–03–2010ರಂದು ಅರ್ಜಿದಾರರ ಪರ ತೀರ್ಪು ನೀಡಿ ದಿನಾಂಕ : 26–08–99ರ ಸರ್ಕಾರಿ ಆದೇಶದಂತೆ ಪಿಲಿಕುಳ ನಿಸರ್ಗಧಾಮಕ್ಕೆ ಡಾ॥ ಶಿವರಾಂ ಕಾರಂತರ ಹೆಸರನ್ನು ನಾಮಕರಣ ಮಾಡುವಂತೆ ಆದೇಶಿಸಿರುವುದಾಗಿ ತಿಳಿಸಿರುತ್ತಾರೆ. ಸದರಿ ತೀರ್ಪಿನಂತೆ ಪಿಲಿಕುಳ ನಿಸರ್ಗಧಾಮಕ್ಕೆ **"ಡಾ॥ ಶಿವರಾಂ ಕಾರಂತ ಪಿಲಿಕುಳ ನಿಸರ್ಗಧಾಮ"** ಎಂದು ನಾಮಕರಣ ಮಾಡಿದ್ದು, ಈ ನಾಮಕರಣವು ರಾಜ್ಯ ಸರ್ಕಾರದ ದಿನಾಂಕ : 26–08–99ರ ಆದೇಶ ಮತ್ತು ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ : 04–03–2010ರ ತೀರ್ಪಿನ ಉಲ್ಲಂಘನೆಯಾಗುತ್ತಿದೆಯೇ ಎಂಬ ಕುರಿತು ಸರ್ಕಾರದ ನಿರ್ದೇಶನ ಕೋರಿರುತ್ತಾರೆ.

3. ಕೋರಿಕೆಯನ್ನು ಪರಿಶೀಲಿಸಲಾಗಿ ರಿಟ್ ಅರ್ಜಿದಾರರು ಪಿಲಿಕುಳ ನಿಸರ್ಗಧಾಮಕ್ಕೆ **"ಡಾ॥ ಶಿವರಾಂ ಕಾರಂತ ನಿಸರ್ಗಧಾಮ"**ವೆಂದು ನಾಮಕರಣ ಮಾಡುವ ಕುರಿತು ಆದೇಶ ಕೋರಿರುವುದು ಸ್ಪಷ್ಟವಾಗಿರುತ್ತದೆ. ಅರ್ಜಿದಾರರು **"ಪಿಲಿಕುಳ ನಿಸರ್ಗಧಾಮ"**ಕ್ಕೆ ಹೆಸರು ಬದಲಾವಣೆ ಕುರಿತು ಆದೇಶ ಪಡೆದಿರುವುದರಿಂದ ಸದರಿ ನಿಸರ್ಗಧಾಮಕ್ಕೆ **"ಡಾ॥ ಶಿವರಾಂ ಕಾರಂತ ನಿಸರ್ಗಧಾಮ"**ವೆಂದು ನಾಮಕರಣ ಮಾಡಬೇಕಾಗಿರುತ್ತದೆ. **"ಡಾ॥ ಶಿವರಾಂ ಕಾರಂತ ಪಿಲಿಕುಳ ನಿಸರ್ಗಧಾಮ"** ಎಂದು ನಾಮಕರಣ ಮಾಡುವುದು ರಾಜ್ಯ ಸರ್ಕಾರದ ದಿನಾಂಕ : 26–08–1999ರ ಆದೇಶ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ : 04–03–2010ರ ಆದೇಶಗಳ ಉಲ್ಲಂಘನೆಯಾಗುತ್ತದೆ. ಆದ್ದರಿಂದ ಈ ಕೆಳಗಿನಂತೆ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ಅಪಜೀ 154 ಎಫ್‌ಡಬ್ಲ್ಯೂಎಲ್ 2013, ಬೆಂಗಳೂರು, ದಿನಾಂಕ : 27–12–2013.

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯ ಪಿಲಿಕುಳ ನಿಸರ್ಗಧಾಮಕ್ಕೆ ಈ ಕೂಡಲೇ ಜಾರಿಗೆ ಬರುವಂತೆ **"ಡಾ॥ ಶಿವರಾಮ ಕಾರಂತ ನಿಸರ್ಗಧಾಮ"** ಎಂದು ನಾಮಕರಣ ಮಾಡಿ ಸರ್ಕಾರ ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಸ್.ಪಿ. ಪಾಟೀಲ

ಸರ್ಕಾರದ ಅಧೀನ ಕಾರ್ಯದರ್ಶಿ,

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

PR. 372
SC-100

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ವಿಷಯ : ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ (Karnataka Eco-tourism Development Board)ಗೆ ಕಾರ್ಯಕಾರಿ ಸಮಿತಿಯನ್ನು ರಚಿಸುವ ಬಗ್ಗೆ.

ಓದಲಾಗಿದೆ : ಸರ್ಕಾರದ ಆದೇಶ ಸಂಖ್ಯೆ : ಅಪಜೀ 60 ಎಫ್‌ಡಬ್ಲ್ಯೂಎಲ್ 2010, ದಿನಾಂಕ : 24–02–2012.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ : 24–02–2012ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ನಿಯಮ ಮತ್ತು ವಿನಿಯಮಗಳು ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಇವರ ನೇತೃತ್ವದಲ್ಲಿ ಪದನಿಮಿತ್ತ ಅಧಿಕಾರಿಗಳನ್ನೊಳಗೊಂಡ ಸರ್ಕಾರದಿಂದ ನೇಮಿಸಲ್ಪಟ್ಟ ಒಂದು ಕಾರ್ಯಕಾರಿ ಸಮಿತಿಯನ್ನು ರಚಿಸಲು ಅವಕಾಶ ಕಲ್ಪಿಸಿದೆ.

ಆದ್ದರಿಂದ, ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಗೆ ಕಾರ್ಯಕಾರಿ ಸಮಿತಿಯನ್ನು ರಚಿಸಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಕೆಳಗಿನಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಅಪಜೀ 64 ಎಫ್‌ಡಬ್ಲ್ಯೂಎಲ್ 2014, ಬೆಂಗಳೂರು, ದಿನಾಂಕ : 26–02–2014.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ಮೆಮೊರಾಂಡಾಂ ಆಫ್ ಅಸೋಸಿಯೇಷನ್ ಮತ್ತು ಆರ್ಟಿಕಲ್ಸ್ ಆಫ್ ಅಸೋಸಿಯೇಷನ್ ರನ್ವಯ ಸದರಿ ಮಂಡಳಿಗೆ ಈ ಕೆಳಕಂಡಂತೆ ಕಾರ್ಯಕಾರಿ ಸಮಿತಿಯನ್ನು ರಚಿಸಿ ಆದೇಶ ಹೊರಡಿಸಲಾಗಿದೆ.

1.	ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ	ಅಧ್ಯಕ್ಷರು
2.	ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಪ್ರವಾಸೋದ್ಯಮ ಇಲಾಖೆ	ಸದಸ್ಯರು
3.	ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ, ಪಡೆ ಮುಖ್ಯಸ್ಥರು) ಬೆಂಗಳೂರು	ಸದಸ್ಯರು
4.	ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಬೆಂಗಳೂರು	ಸದಸ್ಯರು
5.	ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಯವ್ಯಯ ಮತ್ತು ಸಂಪನ್ಮೂಲ)	ಸದಸ್ಯರು
6.	ಸರ್ಕಾರದ ಪ್ರಧಾನ ಕಾರ್ಯದರ್ಶಿ, ಬೃಹತ್ ನೀರಾವರಿ ಇಲಾಖೆ	ಸದಸ್ಯರು
7.	ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಸಣ್ಣ ನೀರಾವರಿ ಇಲಾಖೆ	ಸದಸ್ಯರು
8.	ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಖನಿಜ ಭವನ, ಬೆಂಗಳೂರು	ಸದಸ್ಯರು
9.	ವ್ಯವಸ್ಥಾಪಕ ನಿರ್ದೇಶಕರು, ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಲಿಮಿಟೆಡ್, ಬೆಂಗಳೂರು	ಸದಸ್ಯರು
10.	ನಿರ್ದೇಶಕರು, ಮೀನುಗಾರಿಕಾ ಇಲಾಖೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು	ಸದಸ್ಯರು
11.	ನಿರ್ದೇಶಕರು, ಇನ್‌ಸ್ಟಿಟ್ಯೂಟ್ ಆಫ್ ಹೋಟಲ್ ಮ್ಯಾನೇಜ್‌ಮೆಂಟ್, ಬೆಂಗಳೂರು	ಸದಸ್ಯರು
12.	ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲಾಬಾಗ್, ಬೆಂಗಳೂರು	ಸದಸ್ಯರು
13.	ವ್ಯವಸ್ಥಾಪಕ ನಿರ್ದೇಶಕರು (ಅಥವಾ ಅವರಿಂದ ನಾಮನಿರ್ದೇಶಿತರು) ಕರ್ನಾಟಕ ವಿದ್ಯುತ್ ನಿಗಮ ಲಿ., ಬೆಂಗಳೂರು	ಸದಸ್ಯರು
14.	ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ	ಸದಸ್ಯ–ಕಾರ್ಯದರ್ಶಿ

ಸದರಿ ಕಾರ್ಯಕಾರಿ ಸಮಿತಿಯ ಅಧಿಕಾರ, ಕರ್ತವ್ಯ ಹಾಗೂ ಜವಾಬ್ದಾರಿಗಳು ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ಆರ್ಟಿಕಲ್ಸ್ ಆಫ್ ಅಸೋಸಿಯೇಷನ್ ನಲ್ಲಿ ನಮೂದಿಸಿರುವಂತೆ ಇರುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಸ್.ಪಿ. ಪಾಟೀಲ

ಸರ್ಕಾರದ ಅಧೀನ ಕಾರ್ಯದರ್ಶಿ,

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

PR. 373

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ವಿಷಯ : ಕರ್ನಾಟಕ ರಾಜ್ಯ ಔಷಧಿ ಗಿಡಮೂಲಿಕಾ ಪ್ರಾಧಿಕಾರದ (ಕಂಪ)ದ ಆಡಳಿತ ಮಂಡಳಿಯನ್ನು ಪುನರ್ ರಚಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ಔಷಧಿ ಗಿಡಮೂಲಿಕಾ ಪ್ರಾಧಿಕಾರ (ಕಂಪ) ಇವರ ಪತ್ರ ಸಂಖ್ಯೆ : ಕಂಪ/ಆಮಂ/82/2013–14, ದಿನಾಂಕ : 10–06–2013 ಮತ್ತು 06–01–2014.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ : 10–06–2013 ಮತ್ತು 06–01–2014ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ಔಷಧಿ ಗಿಡಮೂಲಿಕಾ ಪ್ರಾಧಿಕಾರ (ಕಂಪ) ಇವರು ಕರ್ನಾಟಕ ರಾಜ್ಯ ಔಷಧಿ ಗಿಡಮೂಲಿಕಾ ಪ್ರಾಧಿಕಾರದ (ಕಂಪ) ಆಡಳಿತ ಮಂಡಳಿ ಅಧಿಕಾರ ಅವಧಿಯು 31–03–2013ಕ್ಕೆ ಕೊನೆಗೊಂಡಿದ್ದು, ಕರ್ನಾಟಕ ರಾಜ್ಯ ಔಷಧಿ ಗಿಡಮೂಲಿಕ ಪ್ರಾಧಿಕಾರದ "ಮೆಮೋರಾಂಡಮ್ ಆಫ್ ಅಸೋಸಿಯೇಷನ್" ರನ್ವಯ ದಿನಾಂಕ : 01–04–2013 ರಿಂದ ಅನ್ವಯವಾಗುವಂತೆ ಹೊಸ ಆಡಳಿತ ಮಂಡಳಿಯನ್ನು ಪುನರ್ ರಚಿಸಲು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಅಪಜೀ 80 ಎಫ್‌ಪಿಸಿ 2013, ಬೆಂಗಳೂರು, ದಿನಾಂಕ : 10–02–2014.

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಸರ್ಕಾರವು ಕರ್ನಾಟಕ ರಾಜ್ಯ ಔಷಧಿ ಗಿಡಮೂಲಿಕಾ ಪ್ರಾಧಿಕಾರದ ಮೆಮೂರಾಂಡಂ ಆಫ್ ಅಸೋಸಿಯೇಷನ್ ರನ್ವಯ ಈ ಕೆಳಕಂಡಂತೆ ಸದರಿ ಪ್ರಾಧಿಕಾರದ ಆಡಳಿತ ಮಂಡಳಿಯನ್ನು ಪುನರ್‌ರಚಿಸಿ ಪ್ರಾಧಿಕಾರದ ಅವಧಿಯನ್ನು ದಿನಾಂಕ : 01–04–2013 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಪುನರ್ ರಚಿಸಿ ಆದೇಶಿಸಿದೆ :–

1.	ಮಾನ್ಯ ಅರಣ್ಯ ಸಚಿವರು	ಅಧ್ಯಕ್ಷರು
2.	ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ	ಸದಸ್ಯರು
3.	ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ	ಸದಸ್ಯರು
4.	ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ	ಸದಸ್ಯರು
5.	ಪ್ರಧಾನ ಕಾರ್ಯದರ್ಶಿ, ಕೃಷಿ ಮತ್ತು ತೋಟಗಾರಿಕೆ ಇಲಾಖೆ.	ಸದಸ್ಯರು
6.	ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ	ಸದಸ್ಯರು
7.	ಪ್ರಧಾನ ಕಾರ್ಯದರ್ಶಿ (ತೋಟಗಾರಿಕೆ) ಕೃಷಿ ಮತ್ತು ತೋಟಗಾರಿಕೆ ಇಲಾಖೆ	ಸದಸ್ಯರು
8.	ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ	ಸದಸ್ಯರು
9.	ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು	ಸದಸ್ಯರು
10.	ನಿರ್ದೇಶಕರು, ಭಾರತೀಯ ವೈದ್ಯ ಪದ್ಧತಿಗಳು, ಬೆಂಗಳೂರು	ಸದಸ್ಯರು
11.	ಶ್ರೀ ಜಿ.ಎನ್. ಶ್ರೀಕಂಠಯ್ಯ, ಐ.ಎಫ್.ಎಸ್., ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಭೂದಾಖಲೆ, 2ನೇ ಮಹಡಿ, ಅರಣ್ಯ ಭವನ, ಬೆಂಗಳೂರು	ಸದಸ್ಯರು

ಅಧಿಕಾರೇತರ ಸದಸ್ಯರುಗಳು

12. ಡಾ॥ ಪದ್ಮ ವೆಂಕಟ್, ನಿರ್ದೇಶಕರು, ಎಫ್.ಆರ್.ಎಲ್.ಹೆಚ್.ಟಿ. ನಂ. 74/2, ಜಾರಕಬಂಡೆ ಕಾವಲ್, ಅಟ್ಟೂರ್ ಅಂಚೆ, ಯಲಹಂಕ, ಬೆಂಗಳೂರು
13. ಡಾ॥ ಕೇಶವ ಹೆಚ್. ಕೋರ್ಸೆ, ಪ್ರಾಧ್ಯಾಪಕರು ಮತ್ತು ಸಂಶೋಧಕರು, ಔಷಧಿ ಸಸ್ಯಶಾಸ್ತ್ರ ವಿಭಾಗ, ಶ್ರೀ ಧರ್ಮಸ್ಥಳ ಮಂಜುನಾಥ ಕಾಲೇಜು, ಉಜಿರೆ (ದಕ್ಷಿಣ ಕನ್ನಡ)
14. **ಮೂಲಿಕೆ ಔಷಧಿ ಉತ್ಪಾದಕರು ಪ್ರತಿನಿಧಿ :**
    ಜೆ.ಎಸ್.ಡಿ. ಪಾಣಿ, ಅಧ್ಯಕ್ಷರು, ಕರ್ನಾಟಕ ರಾಜ್ಯ ಭಾರತೀಯ ವೈದ್ಯ ಪದ್ಧತಿ ಔಷಧಿಗಳ ಉತ್ಪಾದಕರ ಸಂಘ (ರಿ) (ಕಿಮ್ಮ) ನಂ. 126/6, ಚೇಳಕೆರೆ (ಶುಶ್ರೂತ ಆಸ್ಪತ್ರೆ ಮುಂಭಾಗ), ಕಲ್ಯಾಣ ನಗರ, ಬೆಂಗಳೂರು–43.
15. **ಗಿಡಮೂಲಿಕಾ ಸಸ್ಯಗಳ ಮಾರಾಟಗಾರರ ಪ್ರತಿನಿಧಿ :**
    ಡಾ॥ ಕರಿಯಣ್ಣ, ಹಿತಕಾರಿ ನರ್ಸರಿ, ನಂ. 318, 16ಎ ಅಡ್ಡರಸ್ತೆ, 1ನೇ 'ಎ' ಮುಖ್ಯ ರಸ್ತೆ, ಯಲಹಂಕ ಉಪನಗರ, ಬೆಂಗಳೂರು–560064
16. **ಆಯುರ್ವೇದ ವೈದ್ಯರ ಪ್ರತಿನಿಧಿ :**
    ಡಾ॥ ಸತ್ಯನಾರಾಯಣ ಭಟ್, ಆಯುರ್ವೇದ ಮತ್ತು ಔಷಧಿ ಗಿಡಮೂಲಿಕಾ ತಜ್ಞರು, ನಂ. 29, 2ನೇ ಕ್ರಾಸ್, ವೆಂಕಟಪ್ಪ ಕಾಲೋನಿ, ಸಂಜಯ್‌ನಗರ, ಬೆಂಗಳೂರು–94
17. **ಲ್ಯಾಂಪ್ಸ್ ಸೊಸೈಟ್ ಪ್ರತಿನಿಧಿ :**
    ಅಧ್ಯಕ್ಷರು, ಲ್ಯಾಂಪ್ ಸೊಸೈಟಿ, ಉಪ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ ಆವರಣ, ಪುತ್ತೂರು ದಕ್ಷಿಣ ಕನ್ನಡ ಜಿಲ್ಲೆ.
18. **ಗ್ರಾಮ ಅರಣ್ಯ ಸಮಿತಿ ಪ್ರತಿನಿಧಿ :**
    ಶ್ರೀ ಮಾಲಿಂಗ ರೆಡ್ಡಿ, ಅಧ್ಯಕ್ಷರು, ವಿನಾಯಕ ಗ್ರಾಮ ಅರಣ್ಯ ಸಮಿತಿ, ಧರ್ಮ ಸಾಗರ, ಹೊಸಪೇಟೆ ತಾಲ್ಲೂಕು

ಸದರಿ ಆಡಳಿತ ಮಂಡಳಿಯ ಅಧಿಕಾರಾವದಿಯು ಎರಡು ವರ್ಷ ಅಥವಾ ಸರ್ಕಾರ ಇಚ್ಚಿಸುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಇರುತ್ತದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2014-16
Licensed to post without prepayment **WPP No. 297**

ಅಧಿಕಾರೇತರ ಪ್ರತಿನಿಧಿಗಳಿಗೆ ಪ್ರವಾಸಭತ್ಯೆ ಹಾಗೂ ದಿನಭತ್ಯೆಗಳನ್ನು ಸರ್ಕಾರದಲ್ಲಿ ಆಗಿಂದಾಗ್ಯೆ ಜಾರಿಯಲ್ಲಿರುವ ದರಗಳಂತೆ ಪಾವತಿಸಲು ಪ್ರಾಧಿಕಾರವು ಅಧಿಕಾರ ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಎಸ್.ಪಿ. ಪಾಟೀಲ
ಸರ್ಕಾರದ ಅಧೀನ ಕಾರ್ಯದರ್ಶಿ,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

P.R 375

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ಸೇರ್ಪಡೆ

ಸಂ. ಅಪಜೀ 80 ಎಫ್‌ಪಿಸಿ 2013, ಬೆಂಗಳೂರು, ದಿನಾಂಕ : 12–03–2014.

ಸರ್ಕಾರದ ಆದೇಶ ಸಂಖ್ಯೆ : ಅಪಜೀ 80 ಎಫ್‌ಪಿಸಿ 2013, ದಿನಾಂಕ : 10–02–2014ರ ಆದೇಶದ ಭಾಗದಲ್ಲಿನ ಕ್ರಮ ಸಂಖ್ಯೆ : 11ರ ನಂತರ ಈ ಕೆಳಗಿನಂತೆ ಸೇರ್ಪಡೆ ಮಾಡಲಾಗಿದೆ :–

11. (ಅ) ಮುಖ್ಯ ಕಾರ್ಯ ನಿರ್ವಹಣಾಧಿಕಾರಿ – ಸದಸ್ಯ ಕಾರ್ಯದರ್ಶಿ
ಕರ್ನಾಟಕ ರಾಜ್ಯ ಗಿಡಮೂಲಿಕಾ ಔಷಧಿ ಪ್ರಾಧಿಕಾರ, ಬೆಂಗಳೂರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಎಸ್.ಪಿ. ಪಾಟೀಲ
ಸರ್ಕಾರದ ಅಧೀನ ಕಾರ್ಯದರ್ಶಿ,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

P.R 376

ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವಾಲಯ

ತಿದ್ದುಪಡಿ

ಸಂ. ಪಸಂಮೀ 125 ಮೀಇಇ 2013, ಬೆಂಗಳೂರು, ದಿನಾಂಕ : 28–04–2014.

ಕರ್ನಾಟಕ ರಾಜ್ಯ ಪತ್ರ ದಿನಾಂಕ : 06–03–2014ರಲ್ಲಿ ಪ್ರಕಟಣೆಯಾದ ಸರ್ಕಾರಿ ಆದೇಶ ಸಂಖ್ಯೆ : ಪಸಂಮೀ/125/ಮೀಇಇ/2013, ದಿನಾಂಕ : 21–02–2014ರ ಕಂಡಿಕೆ–7 (ಅ) ಭಾಗದ ಎರಡನೇ ಸಾಲಿನಲ್ಲಿ (ಇಜಿಜಿಜಆಭಿಣುತಜ ಘಚಿಣಜಡಿ ಖಠಿಚಿಡಿಜಚಿಜ ಂಡಿಜಚಿ) ಎಂದಿರುವುದನ್ನು (Effective Water Spread Area) ಎಂಬುದಾಗಿ ತಿದ್ದುಪಡಿ ಮಾಡಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಕೆ.ಹೆಚ್. ಅಶ್ವತ್ಥನಾರಾಯಣ ಗೌಡ
ಸರ್ಕಾರದ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ.

P.R 387
SC-1000

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59